ಸಂಪುಟ 01 । ಸಂಚಿಕೆ 247 । ಬುಧವಾರ 11 ನವೆಂಬರ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರು,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ರದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) ರಾಷ್ಟ್ರೀಯ ಶಿಕ್ಷಣ ದಿನA (National Education Day): ಭಾರತದ ಪ್ರಥಮ ಶಿಕ್ಷಣ ಸಚಿವರಾದ ಮೌಲಾನಾ ಅಬುಲ್ ಕಲಾಮ್ ಆಜಾದ್ ಅವರ ಜನ್ಮದಿನವನ್ನು ಭಾರತದಲ್ಲಿ ರಾಷ್ಟ್ರೀಯ ಶಿಕ್ಷಣ ದಿನವನ್ನಾಗಿ ಆಚರಿಸಲಾಗುತ್ತದೆ. ಈ ದಿನದಂದು ಶಿಕ್ಷಣ ಕ್ಷೇತ್ರಕ್ಕೆ ಕೊಡುಗೆ ನೀಡಿದವರು ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಲಾಗುತ್ತದೆ.

2) ಯಮ ದ್ವಿತೀಯ (Yama Dwitiya / ಭ್ರಾತೃ ದ್ವಿತೀಯ): ಈ ದಿನವನ್ನು ಯಮ ದ್ವಿತೀಯ ಎಂದು ಆಚರಿಸಲಾಗುತ್ತದೆ.

3) 11:11 ಮ್ಯಾನಿಫೆಸ್ಟೇಷನ್ ಪೋರ್ಟಲ್ (11:11 Manifestation Portal): ವರ್ಷಕ್ಕೊಮ್ಮೆ ಬರುವ ಈ ದಿನವನ್ನು ಆಧ್ಯಾತ್ಮಿಕ ಹಾಗೂ ನಂಬಿಕೆಗಳ ಪ್ರಕಾರ ವಿಶೇಷ ಶಕ್ತಿಶಾಲಿ 'ಮ್ಯಾನಿಫೆಸ್ಟೇಷನ್ ದಿನ' ಎಂದು ಪರಿಗಣಿಸಲಾಗುತ್ತದೆ.

4) ಅಂತರರಾಷ್ಟ್ರೀಯ ದಿನಗಳು: ಜಗತ್ತಿನಾದ್ಯಂತ ಈ ದಿನವನ್ನು ಅಂತರರಾಷ್ಟ್ರೀಯ ಒರಿಗಮಿ ದಿನ (International Origami Day) ಹಾಗೂ ವಿಶ್ವ ಸಮರ ಖ ಕೊನೆಗೊಂಡ ನೆನಪಿಗಾಗಿ ಕದನವಿರಾಮ ದಿನ (Armistice Day) / ವೆಟರನ್ಸ್ ಡೇ (ಅಮೆರಿಕದಲ್ಲಿ) ಆಗಿ ಆಚರಿಸಲಾಗುತ್ತದೆ.

ಸುಭಾಷಿತ

ನಿಮ್ಮ ನಂಬಿಕೆಯಂತೆ ನೀವಾಗುತ್ತೀರಿ,
ನಿಮ್ಮನ್ನು ನೀವು ಋಷಿಗಳೆಂದು ನಂಬಿದರೆ
ನೀವು ನಾಳೆ ಋಷಿಗಳೇ ಆಗುತ್ತೀರಿ.

ಸ್ವಾಮಿ ವಿವೇಕಾನಂದ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಜಿಲ್ಲಾ ಪಂಚಾಯತ್,ತಾಲೂಕು

ಪಂಚಾಯತ್ ಚುನಾವಣೆಗೆ ಆಯೋಗ ಸಿದ್ಧತೆ

ಬೆಂಗಳೂರು: ಕರ್ನಾಟಕದಲ್ಲಿ 2027ರ ಜನವರಿಯಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಸುವ ಸಾಧ್ಯತೆ ಹಿನ್ನೆಲೆಯಲ್ಲಿ ರಾಜ್ಯ ಚುನಾವಣಾ ಆಯೋಗ ಚುನಾವಣಾ ಸಿದ್ಧತೆಗಳನ್ನು ಚುರುಕುಗೊಳಿಸಿದೆ.



ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಗಳಿಗೆ ಚುನಾವಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಆರಂಭಿಸುವಂತೆ ಆಯೋಗ ನಿರ್ದೇಶನ ನೀಡಿದೆ. ರಾಜ್ಯ ಚುನಾವಣಾ ಆಯೋಗ ಶನಿವಾರ ಹೊರಡಿಸಿರುವ ನಿರ್ದೇಶನದಂತೆ, ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಸಹಾಯಕ ಆಯುಕ್ತರ ಹುದ್ದೆಯ ಅಥವಾ ಅದಕ್ಕೆ ಸಮಾನ ಶ್ರೇಣಿಯ ಅಧಿಕಾರಿಗಳನ್ನು ಚುನಾವಣಾಧಿಕಾರಿಗಳಾಗಿ ನೇಮಿಸಬೇಕು. ತಾಲೂಕು ಪಂಚಾಯಿತಿ ಕ್ಷೇತ್ರಗಳಿಗೆ ತಹಸೀಲ್ದಾರ್ ಅಥವಾ ಸಮಾನ ಶ್ರೇಣಿಯ ಅಧಿಕಾರಿಗಳನ್ನು ಚುನಾವಣಾಧಿಕಾರಿಗಳಾಗಿ ನೇಮಿಸಲು ಸೂಚಿಸಲಾಗಿದೆ. ನವೆಂಬರ್ 16ರೊಳಗೆ ಪಟ್ಟಿ ಸಲ್ಲಿಕೆ ಜಿಲ್ಲಾಧಿಕಾರಿಗಳು ಪ್ರಾಥಮಿಕ ಸಭೆಗಳನ್ನು ನಡೆಸಿ, ನೇಮಕಗೊಳ್ಳುವ ಚುನಾವಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳಿಗೆ ಅಗತ್ಯ ತರಬೇತಿ ನೀಡಬೇಕು. ನೇಮಕಾತಿಗೆ ಸಂಬಂಧಿಸಿದ ಪ್ರಸ್ತಾವನೆ ಹಾಗೂ ಆರ್ಒ-ಎಆರ್ಒ ಪಟ್ಟಿಯನ್ನು ನವೆಂಬರ್ 16ರೊಳಗೆ ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕು ಎಂದು ಸೂಚಿಸಲಾಗಿದೆ.ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಗಳ ನಡವಳಿಕೆ) ನಿಯಮಗಳು, 1993ರ ನಿಯಮ 6ರನ್ವಯ ಸೂಕ್ತ ಅಧಿಕಾರಿಗಳನ್ನು ಗುರುತಿಸಿ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕ್ಷೇತ್ರಗಳ ಸಂಖ್ಯೆಗೆ ಅನುಗುಣವಾಗಿ ಅಧಿಕಾರಿಗಳ ನೇಮಕ ಜಿಲ್ಲಾ ಪಂಚಾಯಿತಿ ಚುನಾವಣೆಗೆ ಪ್ರತಿ

3ನೇ ಪುಟಕ್ಕೆ

ನೀರಮಾನ್ವಿ ಯಲ್ಲಮ್ಮದೇವಿ ಸನ್ನಿಧಿಯಲ್ಲಿ ಗೋಪೂಜೆ ನೆರವೇರಿಸಿದ ಶಾಸಕ ಜಿ. ಹಂಪಯ್ಯ ನಾಯಕ್ ಸಾಹುಕಾರ್

ದೀಪಾವಳಿ ಪಾಡ್ಯದ ಅಂಗವಾಗಿ ವಿಶೇಷ ಪೂಜೆ ಸಲ್ಲಿಸಿ ಕ್ಷೇತ್ರದ ಜನತೆಯ ಸುಖ, ಶಾಂತಿ, ಸಮೃದ್ಧಿಗಾಗಿ ಪ್ರಾರ್ಥನೆ



ನೈಜ್ಯ ದೆಸೆ ನ್ಯೂಸ್

ಮಾನ್ವಿ: ಮಾನ್ವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನೀರಮಾನ್ವಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ನೀರಮಾನ್ವಿ ಗ್ರಾಮದ ಸುಕ್ಷೇತ್ರ ಶ್ರೀ ಯಲ್ಲಮ್ಮದೇವಿ ದೇವಸ್ಥಾನದಲ್ಲಿ ದೀಪಾವಳಿ ಹಬ್ಬದ ಪಾಡ್ಯದ ಪ್ರಯುಕ್ತ ವಿಶೇಷ ಪೂಜೆ ಹಾಗೂ ಗೋಪೂಜೆ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ಈ ಶುಭ ಸಂದರ್ಭದಲ್ಲಿ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಸನ್ಮಾನ್ಯ ಶ್ರೀ ಜಿ. ಹಂಪಯ್ಯ ನಾಯಕ್ ಸಾಹುಕಾರ್ ಅವರು ದೇವಸ್ಥಾನಕ್ಕೆ ಭೇಟಿ ನೀಡಿ, ಸಂಪ್ರದಾಯಬದ್ಧವಾಗಿ ಗೋಪೂಜೆ ನೆರವೇರಿಸಿ, ಶ್ರೀ ಯಲ್ಲಮ್ಮದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ದೇವಿಯ ಪವಿತ್ರ ಸನ್ನಿಧಿಯಲ್ಲಿ ಕ್ಷೇತ್ರದ ಜನತೆಯ ಸುಖ, ಶಾಂತಿ, ನೆಮ್ಮದಿ, ಆರೋಗ್ಯ, ಸಮೃದ್ಧಿ ಹಾಗೂ ರೈತರ ಬದುಕಿನಲ್ಲಿ ಸಂತೋಷ ನೆಲೆಸಲಿ ಎಂದು ಪ್ರಾರ್ಥಿಸಿದರು. ಉತ್ತಮ ಮಳೆ, ಸಮೃದ್ಧ ಬೆಳೆ, ರೈತರ ಆರ್ಥಿಕ ಅಭಿವೃದ್ಧಿ ಹಾಗೂ ಸರ್ವ ಸಮುದಾಯಗಳ ಜನರ ಕಲ್ಯಾಣಕ್ಕಾಗಿ ದೇವಿಯ ಆಶೀರ್ವಾದ ಕೋರಿದರು.

ದೀಪಾವಳಿ ಹಬ್ಬವು ಅಂಧಕಾರವನ್ನು ದೂರಮಾಡಿ ಬೆಳಕನ್ನು ಹರಡುವ ಪವಿತ್ರ ಹಬ್ಬವಾಗಿದ್ದು, ಗೋಪೂಜೆಯು ಭಾರತೀಯ ಸಂಸ್ಕೃತಿ, ಕೃಷಿ ಪರಂಪರೆ ಹಾಗೂ ಗೋಸಂಪತ್ತಿನ ಮಹತ್ವವನ್ನು ಸಾರುವ ವಿಶೇಷ ಆಚರಣೆಯಾಗಿದೆ. ಇಂತಹ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾಜದಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ, ಸಹೋದರತ್ವ ಹಾಗೂ ಸಾಮರಸ್ಯವನ್ನು ಬೆಳೆಸಲು ಸಹಕಾರಿಯಾಗಿವೆ.

ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿಗಳಾದ ಭೀಮರಾಯ ರಾಮಸಮುದ್ರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಬಿ.ಕೆ. ಅಮರೇಶಪ್ಪ ವಕೀಲರು, ಸಿದ್ದಲಿಂಗಪ್ಪ ವಕೀಲರು, ಗೋಪಾಲ್ ನಾಯಕ್ ನೀರಮಾನ್ವಿ, ಬೀರಪ್ಪ ಬಲ್ಲಟಗಿ, ಶರಣಬಸವ ನೀರಮಾನ್ವಿ, ರಸೂಲ್ ಕುರೇಶಿ, ಸತ್ತಾರ್ ಬಂಗ್ಲೆವಾಲೆ, ರಂಗನಾಥ್ ನಾಯಕ್, ಮಹಾಂತೇಶ ನಕ್ಕುಂದಿ, ಕಂದಾಯ ನಿರೀಕ್ಷಕರಾದ ಚರಣ್ ಸಿಂಗ್ ಠಾಕೂರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಮುಖಂಡರು, ಗ್ರಾಮದ ಹಿರಿಯರು, ಸಾರ್ವಜನಿಕರು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.

ದೀಪಾವಳಿ ಪಾಡ್ಯದ ಪವಿತ್ರ ಸಂದರ್ಭದಲ್ಲಿ ನಡೆದ ಗೋಪೂಜೆ ಹಾಗೂ ಶ್ರೀ ಯಲ್ಲಮ್ಮದೇವಿಯ ವಿಶೇಷ ಪೂಜೆಯು ಧಾರ್ಮಿಕ ಶ್ರದ್ಧೆ, ಸಾಂಸ್ಕೃತಿಕ ಪರಂಪರೆ ಮತ್ತು ಜನಕಲ್ಯಾಣದ ಆಶಯಗಳಿಗೆ ಸಾಕ್ಷಿಯಾಯಿತು.

ಸಾಗುವಾನಿ ಮರ ತುಂಬಿದ ಮೂರು ಬೊಲೆರೋ ವಾಹನ ಜಪ್ತಿ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ತಾಲೂಕಿನ ಹಿರೇಉಪ್ಪೇರಿ ಗ್ರಾಮದಲ್ಲಿ ಸಾಗವಾನಿ ಮರ ಕಡಿದು ದೇವದುರ್ಗ ತಾಲೂಕಿನ ಊಟಿ ಗ್ರಾಮಕ್ಕೆ ಅಕ್ರಮವಾಗಿ ಸಾಗುತ್ತಿದ್ದ ವೇಳೆ ಖಚಿತ ಮಾಹಿತಿಯ ಮೇರೆಗೆ ಪಟ್ಟಣದ ಬಸವಸಾಗರ ವೃತ್ತದಲ್ಲಿ ಪೊಲೀಸರು ದಾಳಿ ನಡೆಸಿ ಮಾಲು ಸಮೇತ ಜಪ್ತಿ ಮಾಡಿದ್ದಾರೆ.



ಮೂರು ಬೊಲೆರೋ ಗೂಡ್ಸ್ ವಾಹನದಲ್ಲಿ 3.874 ಮೀಟರ್ ಅಳತೆಯ 119 ಘನ ಸಾಗುವಾನಿ ಮರದ ತುಂಡುಗಳನ್ನು ಯಾವುದೇ ದಾಖಲಾತಿ ಇಲ್ಲದೆ ಅಕ್ರಮವಾಗಿ ದೇವದುರ್ಗ ತಾಲೂಕಿನ ಊಟಿ ಗ್ರಾಮಕ್ಕೆ ಸಾಗಿಸುತ್ತಿದ್ದ ವೇಳೆಯಲ್ಲಿ ಪಟ್ಟಣದ ಬಸವಸಾಗರ ವೃತ್ತದಲ್ಲಿ ಪಿಐ ಹೊಸಕೇರಪ್ಪ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ ದಾಳಿ ನಡೆಸಿ 4.82.761 ರೂ. ಮೌಲ್ಯದ ಸಾಗುವಾನಿ ಮರದ ತುಂಡುಗಳು ಹಾಗೂ ಮೂರು ಬೊಲೆರೋ ಗೂಡ್ಸ್ ವಾಹನಗಳನ್ನು ಜಪ್ತಿ ಮಾಡಿ ಗೂಡ್ಸ್ ವಾಹನಗಳ ಚಾಲಕರಾದ ಮಲ್ಲೇಶ ಹುಣಸಿಗಿಡದ, ಅಭಿಜಿತ, ಫಕ್ರುದ್ದೀನ್ ಮುಲ್ಲಾ, ಆಂಜನೇಯ ಮ್ಯಾಕಲರ್ ಹಾಗೂ ಜಮೀನು ಮಾಲಿಕನ ವಿರುದ್ದ ಪ್ರಕರಣ ದಾಖಲಿಸಿ ತನಿಖೆ ಕೈಗೊಂಡಿದ್ದಾರೆ .

ಉದ್ಯೋಗಿಗಳಿಗೆ ತಲಾ 1 ಲಕ್ಷ ರೂ ನಗದು ದೀಪಾವಳಿ ಬೋನಸ್ ನೀಡಿದ ಉದ್ಯಮಿ

ನೈಜ್ಯ ದೆಸೆ ನ್ಯೂಸ್

ಸೂರತ್: ಸಾಮಾನ್ಯವಾಗಿ ಉದ್ಯೋಗಿಗಳಿಗೆ ದೀಪಾವಳಿ ಬೋನಸ್ ಎಂದರೆ ಹೆಚ್ಚುವರಿ ಒಂದು ತಿಂಗಳ ವೇತನ, ಸಿಹಿತಿಂಡಿ ಬಾಕ್ಸ್ ಅಥವಾ ಡ್ರೈಫ್ರೂಟ್ಸ್ ಉಡುಗೊರೆ. ಆದರೆ ಇಲ್ಲಿನ ಜವಳಿ ಉದ್ಯಮಿಯೊಬ್ಬರು ತಮ್ಮ ಉದ್ಯೋಗಿಗಳಿಗೆ ಈ ಬಾರಿ ನೀಡಿರುವ ದೀಪಾವಳಿ ಉಡುಗೊರೆ ಎಲ್ಲರ ಗಮನ ಸೆಳೆದಿದೆ. ಸೂರತ್‌ನ ಜವಳಿ ಉದ್ಯಮಿ ರಾಮ್‌ಸ್ವರೂಪ್ ಮುಂಡೆ ಅವರು ತಮ್ಮ ಸಂಸ್ಥೆಯಲ್ಲಿ ಕೆಲಸ ಮಾಡುವ 20 ಉದ್ಯೋಗಿಗಳಿಗೆ ತಲಾ 1 ಲಕ್ಷ ರೂ.ಗೂ ಅಧಿಕ ನಗದು ಹಣವನ್ನು ದೀಪಾವಳಿ ಉಡುಗೊರೆಯಾಗಿ ನೀಡಿದ್ದಾರೆ. ಈ ವಿಶಿಷ್ಟ ಬೋನಸ್ ವಿತರಣೆಯ ವಿಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.



ಈ ಉಡುಗೊರೆಯ ವಿಶೇಷತೆಯೆಂದರೆ ಹಣವನ್ನು ಸಾಮಾನ್ಯವಾಗಿ ಲಕೋಟೆಯಲ್ಲಿ ನೀಡುವ ಬದಲು, ಅಲಂಕೃತ ಪೂಜಾ ತಟ್ಟೆಗಳಲ್ಲಿ ನಗದು ರೂಪದಲ್ಲಿ ನೀಡಲಾಗಿದೆ.ಬೆಳ್ಳಿ ಬಣ್ಣದ ಪೂಜಾ ತಟ್ಟೆಗಳಲ್ಲಿ 10 ರೂ.ನಿಂದ 500 ರೂ.ವರೆಗಿನ ವಿವಿಧ ಮುಖಬೆಲೆಯ ಹೊಸ ನೋಟುಗಳ ಕಂತೆಗಳನ್ನು ಅಚ್ಚುಕಟ್ಟಾಗಿ ಜೋಡಿಸಿ ಉದ್ಯೋಗಿಗಳಿಗೆ ನೀಡಲಾಗಿದೆ. ಇನ್ನೊಂದು ವಿಶೇಷವೆಂದರೆ, ಉದ್ಯೋಗಿಗಳ ಪತ್ನಿಯರೇ ಹಣ ತುಂಬಿದ ಈ ತಟ್ಟೆಗಳನ್ನು ತಮ ಪತಿಯರಿಗೆ ಉಡುಗೊರೆಯಾಗಿ ನೀಡಿದ್ದಾರೆ.

ದೇವದುರ್ಗ ಕ್ಷೇತ್ರದಲ್ಲಿ ಬೆಲೆ ಏರಿಕೆ ಖಂಡಿಸಿ ಎಸ್‌ಡಿಪಿಐ ವತಿಯಿಂದ ಪ್ರತಿಭಟನೆ ಜನಸಾಮಾನ್ಯರ ಬದುಕಿನ ಮೇಲೆ ಬೆಲೆ ಏರಿಕೆಯ ಹೊರೆ: ಮಹಿಬೂಬ್ ಬಬ್ಬು

ನೈಜ್ಯ ದೆಸೆ ನ್ಯೂಸ್

ರಾಯಚೂರು: ದಿನದಿಂದ ದಿನಕ್ಕೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿರುವುದು ಹಾಗೂ ಕೆಎಸ್ಆರ್‌ಟಿಸಿ ಬಸ್ ಪ್ರಯಾಣ ದರ ಹೆಚ್ಚಳವನ್ನು ಖಂಡಿಸಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (SDPI) ರಾಯಚೂರು-ದೇವದುರ್ಗ ವಿಧಾನಸಭಾ ಕ್ಷೇತ್ರದ ವತಿಯಿಂದ ನವೆಂಬರ್ 10, 2026ರಂದು ಪ್ರತಿಭಟನೆ ನಡೆಸಲಾಯಿತು.



ತಾಲೂಕು ಅಧ್ಯಕ್ಷರಾದ ಮಹಿಬೂಬ್ ಬಬ್ಬು ಅವರ ಅಧ್ಯಕ್ಷತೆಯಲ್ಲಿ ನಡೆದ ಪ್ರತಿಭಟನೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಬೆಲೆ ಏರಿಕೆ ನೀತಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಲಾಯಿತು. ಒಂದು ಕಡೆ ಸರ್ಕಾರಗಳು ಗ್ಯಾರಂಟಿ ಯೋಜನೆಗಳ ಮೂಲಕ ಜನರಿಗೆ ಸೌಲಭ್ಯಗಳನ್ನು ನೀಡುತ್ತಿರುವುದಾಗಿ ಹೇಳಿಕೊಳ್ಳುತ್ತಿವೆ. ಮತ್ತೊಂದೆಡೆ ಹಾಲು, ಮೊಸರು, ಅಕ್ಕಿ, ಅಡುಗೆ ಎಣ್ಣೆ ಸೇರಿದಂತೆ ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸುವ ಮೂಲಕ ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕಲಾಗುತ್ತಿದೆ. ಇದರಿಂದ ಬಡವರು, ಮಧ್ಯಮ ವರ್ಗದ ಕುಟುಂಬಗಳು ಜೀವನ ನಿರ್ವಹಣೆ ಮಾಡಲು ಸಂಕಷ್ಟ ಎದುರಿಸುವಂತಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಕೇಂದ್ರ ಸರ್ಕಾರದ ವಿರುದ್ಧವೂ ಆಕ್ರೋಶ ವ್ಯಕ್ತಪಡಿಸಿದ ಮುಖಂಡರು, ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಇಳಿಕೆಯಾದ ಸಂದರ್ಭಗಳಲ್ಲಿಯೂ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ಬೆಲೆಗಳು ಜನರಿಗೆ ಹೊರೆಯಾಗುವಂತಿವೆ ಎಂದು ಟೀಕಿಸಿದರು. ಜನರ ಆರ್ಥಿಕ ಸಂಕಷ್ಟವನ್ನು ಅರಿತು ಸರ್ಕಾರಗಳು ತಕ್ಷಣ ಮಧ್ಯಪ್ರವೇಶಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾಕಾರರ ಪ್ರಮುಖ ಬೇಡಿಕೆಗಳು:

* ರಾಜ್ಯ ಸರ್ಕಾರ ಹಾಲಿನ ಬೆಲೆ ಏರಿಕೆಯನ್ನು ತಕ್ಷಣವೇ ಹಿಂಪಡೆಯಬೇಕು.
* ಹೆಚ್ಚಿಸಿರುವ ಕೆಎಸ್ಆರ್‌ಟಿಸಿ ಬಸ್ ಪ್ರಯಾಣ ದರವನ್ನು ಹಿಂದಿನ ದರಕ್ಕೆ ಇಳಿಸಬೇಕು.
* ದಿನಬಳಕೆಯ ಅಗತ್ಯ ವಸ್ತುಗಳು ಹಾಗೂ ದಿನಸಿ ಸಾಮಗ್ರಿಗಳ ಬೆಲೆ ಏರಿಕೆಯನ್ನು ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು.
* ಕಾಳಸಂತೆ ಮತ್ತು ಕೃತಕ ಅಭಾವ ಸೃಷ್ಟಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.
* ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ಬೆಲೆ ನಿಯಂತ್ರಣಕ್ಕೆ ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು.

ಈ ಸಂದರ್ಭದಲ್ಲಿ ಎಸ್‌ಡಿಪಿಐ ರಾಯಚೂರು ಜಿಲ್ಲಾಧ್ಯಕ್ಷ ಖಾದರ್ ಪಾಶ, ಜಿಲ್ಲಾ ಸಮಿತಿ ಸದಸ್ಯ ಬಬ್ಲೂ ಗುರುಗುಂಟಾ, ಯಾದಗಿರಿ ಜಿಲ್ಲಾಧ್ಯಕ್ಷ ಮೊಹಮ್ಮದ್ ಯೂನುಸ್, ದೇವದುರ್ಗ ಸಮಿತಿ ಸದಸ್ಯ ಅಬ್ದುಲ್ ಗಫೂರ್ ಹಾಗೂ ಮಹೇಶ್ ಮಾತನಾಡಿ, ಬೆಲೆ ಏರಿಕೆಯಿಂದ ಸಾಮಾನ್ಯ ಕುಟುಂಬಗಳ ಆರ್ಥಿಕ ಪರಿಸ್ಥಿತಿ ಹದಗೆಡುತ್ತಿದೆ. ಸರ್ಕಾರಗಳು ಜನವಿರೋಧಿ ಬೆಲೆ ಏರಿಕೆಗೆ ಕಡಿವಾಣ ಹಾಕಿ ಜನಸಾಮಾನ್ಯರಿಗೆ ಆರ್ಥಿಕವಾಗಿ ನೆಮ್ಮದಿ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಸ್‌ಡಿಪಿಐ ತಾಲೂಕು ಪ್ರಧಾನ ಕಾರ್ಯದರ್ಶಿ ಸಾಬೀರ್ ಅಹ್ಮದ್, ತಾಲೂಕು ಉಪಾಧ್ಯಕ್ಷ ಫೆರೋಜ್ ಖಾನ್, ತಾಲೂಕು ಅಧ್ಯಕ್ಷ ಮಹಿಬೂಬ್ ಬಬ್ಬು, ರಿಯಾಜ್ ಅಹ್ಮದ್, ಅಬ್ದುಲ್ ಮಜೀದ್ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಸದಸ್ಯರು, ಕಾರ್ಯಕರ್ತರು ಹಾಗೂ ಹಿತೈಷಿಗಳು ಉಪಸ್ಥಿತರಿದ್ದರು.

ಜನಸಾಮಾನ್ಯರ ಬದುಕಿಗೆ ಹೊರೆಯಾಗುತ್ತಿರುವ ಬೆಲೆ ಏರಿಕೆಯನ್ನು ನಿಯಂತ್ರಿಸುವುದು ಸರ್ಕಾರಗಳ ಆದ್ಯ ಕರ್ತವ್ಯವಾಗಬೇಕು ಎಂಬ ಒತ್ತಾಯ ಪ್ರತಿಭಟನೆಯ ಮೂಲಕ ಕೇಳಿಬಂತು.

ಸಾಹಿತ್ಯ ಸಿಂಚನ

ಬೆಳಕಿನ ಹಬ್ಬ ದೀಪಾವಳಿ ??

ದೀಪವ ಹಚ್ಚೋಣ
ದೀಪವ ಹಚ್ಚೋಣ
ಮನೆ ಮನೆಗಳಲ್ಲಿ
ದೀಪವ ಹಚ್ಚೋಣ......

ಕುಂಬಾರಣ್ಣನ ಮಾಡಿದ
ಹಣತೆಯ ದೀಪವ ಹಚ್ಚೋಣ

ರೈತರು ಬೆಳೆದ ಹತ್ತಿಯ ಬತ್ತಿಯ
ದೀಪವ ಹಚ್ಚೋಣ......

ರೈತರು ಬೆಳೆದ ಎಣ್ಣೆ ಕಾಳಿನ
ಎಣ್ಣೆಯೊಂದಿಗೆ ದೀಪವ ಹಚ್ಚೋಣ......

ಕೃತಕ ದೀಪಗಳ ಬದಲು ಪ್ರಕೃತಿ ದೀಪಗಳನ್ನು ಹಚ್ಚೋಣ....

ಭೇದ ಭಾವವಿಲ್ಲದೆ ಹಣತೆಯ ದೀಪಕೆ ದೀಪದಿಂದ
ದೀಪಗಳ ಹಚ್ಚೋಣ.......

ಭರತನಾಡಿನ ಕರುನಾಡಿನಲ್ಲಿ ಹಣತೆಯೊಂದಿಗೆ ಸುಜ್ಞಾನದ
ದೀಪವ ಹಚ್ಚೋಣ.......

ಸರ್ವರು ಸಹ ಬಾಳ್ವೆಯೊಂದಿಗೆ ಪ್ರೀತಿಯ ಹಣತೆಯ
ದೀಪವ ಹಚ್ಚೋಣ..........

ಹಣತೆಗಳ ದೀಪ ಹಚ್ಚಿ
ಬೆಳಕಿನ ಹಬ್ಬ ದೀಪಾವಳಿ ಆಚರಿಸೋಣ.................

ಮಲ್ಲಿಕಾರ್ಜುನ .ಸಿ. ಉದ್ಬಾಳ(ಯು)

ಗುಡ್ಡಗಾಡು ಓಟದ ಸ್ಪರ್ಧೆಯಲ್ಲಿ ಬಿ.ವಿ.ಬಿ. ಪದವಿ ಮಹಾವಿದ್ಯಾಲಯದ ವಿದ್ಯಾರ್ಥಿನಿಗೆ ಚಿನ್ನದ ಪದಕ

ನೈಜ್ಯ ದೆಸೆ ನ್ಯೂಸ್

ಬೀದರ: ಬೀದರ ವಿಶ್ವವಿದ್ಯಾಲಯ ಬೀದರ ಆಯೋಜಿಸಿದ್ದ ಅಂತರ ಕಾಲೇಜುಗಳ ಪುರುಷ ಮತ್ತು ಮಹಿಳಾ ಗುಡ್ಡಗಾಡು ಓಟದ ಸ್ಪರ್ಧೆಯಲ್ಲಿ ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯ ವಿದ್ಯಾರ್ಥಿನಿ ಕು:ಅಂಜಲಿ ತಂದೆ ಲಕ್ಷ್ಮಣ ಬಿ.ಎ.1ನೇ ಸೆಮಿಸ್ಟರನ ವಿದ್ಯಾರ್ಥಿನಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಪಡೆದಿರುತ್ತಾಳೆ,



ಈ ಸಾಧನೆಗೆ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು ಕಲಬುರಗಿ (ಬೀದರ) ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಸಂಚಾಲಕರಾದ ಡಾ. ರಜನೀಶ್ ಎಸ್.ವಾಲಿಯವರು, ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ, ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಶೇಷರಾವ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯವರು ವಿದ್ಯಾರ್ಥಿಯ ಸಾಧನೆಗೆ ಹರ್ಷ ವ್ಯಕ್ತಪಡಿಸಿ, ಅಭಿನಂದನೆ ತಿಳಿಸಿದ್ದಾರೆ.

ವ್ಯಾಪಾರ ಕ್ಷೇತ್ರದ ಸಾಧನೆಯೊಂದಿಗೆ ಸಮಾಜಸೇವೆ, ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ನಾಗುಂಡಿಗೆ ಗೌರವ

ನೈಜ್ಯ ದೆಸೆ ನ್ಯೂಸ್

ದೇವದುರ್ಗ: ಪಟ್ಟಣದ ಯುವ ಉದ್ಯಮಿ ಹಾಗೂ ಲಿಮ್ರಾ ಜ್ಯೂಸ್ ಸೆಂಟರ್ ಮಾಲೀಕರಾದ ಮೊಹಮ್ಮದ್ ಮಹಿಬೂಬ್ ನಾಗುಂಡಿ ಅವರು ಸಮಾಜಸೇವೆ, ಉದ್ಯಮ ಹಾಗೂ ಕನ್ನಡಪರ ಚಟುವಟಿಕೆಗಳಲ್ಲಿ ಸಲ್ಲಿಸಿರುವ ಕೊಡುಗೆಯನ್ನು ಗುರುತಿಸಿ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಕಲಾ ಸಂಕೂಲ ಸಂಸ್ಥೆಯ ವತಿಯಿಂದ ನವೆಂಬರ್ 8ರಂದು ಬೆಂಗಳೂರಿನ ರಂಗಮಂದಿರದಲ್ಲಿ ಆಯೋಜಿಸಿದ್ದ 'ದೇಸಿ ಸಂಭ್ರಮ' ಕಾರ್ಯಕ್ರಮದಲ್ಲಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಮೊಹಮ್ಮದ್ ಮಹಿಬೂಬ್ ನಾಗುಂಡಿ ಅವರು ಎಸ್‌ಎಸ್‌ಎಲ್‌ಸಿ ವರೆಗೆ ಶಿಕ್ಷಣ ಪಡೆದಿದ್ದು, 1996ರಲ್ಲಿ ಅವರ ತಂದೆ ಮೊಹಮ್ಮದ್ ಖಾಸಿಂ ಸಾಬ್ ಅವರು ಆರಂಭಿಸಿದ್ದ ಕುಟುಂಬದ ಉದ್ಯಮವನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಬರುತ್ತಿದ್ದಾರೆ. ಸುಮಾರು ಮೂರು ದಶಕಗಳ ಉದ್ಯಮದ ಅನುಭವ ಹೊಂದಿರುವ ಅವರು ಗ್ರಾಹಕರ ವಿಶ್ವಾಸ ಗಳಿಸುವುದರ ಜೊತೆಗೆ ಬಿರಿಯಾನಿ, ಜಿಲೇಬಿ, ಸಮೋಸಾ ಸೇರಿದಂತೆ ವಿವಿಧ ಆಹಾರ



ಪದಾರ್ಥಗಳ ವ್ಯಾಪಾರವನ್ನು ವಿಸ್ತರಿಸಿದ್ದಾರೆ. ಉದ್ಯೋಗಿಗಳನ್ನು ತಮ್ಮ ಕುಟುಂಬದ ಸದಸ್ಯರಂತೆ ಕಾಣುವುದು ನಾಗುಂಡಿ ಅವರ ವಿಶೇಷ ಗುಣವಾಗಿದೆ. ನಾಗಾಲ್ಯಾಂಡ್, ಒಡಿಶಾ, ಹೈದರಾಬಾದ್ ಹಾಗೂ ಉತ್ತರ ಪ್ರದೇಶ ಸೇರಿದಂತೆ ದೇಶದ ವಿವಿಧ ಭಾಗಗಳ ಜನರಿಗೆ ಉದ್ಯೋಗಾವಕಾಶ ಕಲ್ಪಿಸಿದ್ದಾರೆ. ಆರ್ಥಿಕ ಸಂಕಷ್ಟದ ಸಂದರ್ಭಗಳಲ್ಲಿಯೂ ಕಾರ್ಮಿಕರಿಗೆ ವೇತನ ಪಾವತಿಸುವ ಮೂಲಕ ಮಾನವೀಯ ಕಾಳಜಿ ತೋರಿದ್ದಾರೆ.

ಲಿಮ್ರಾ ಜ್ಯೂಸ್ ಸೆಂಟರ್‌ನಲ್ಲಿ ರಾಸಾಯನಿಕ ಪದಾರ್ಥಗಳನ್ನು ಬಳಸದೆ ತಯಾರಿಸುವ ನೈಸರ್ಗಿಕ ಹಣ್ಣಿನ ರಸಗಳು ಗ್ರಾಹಕರ ಮೆಚ್ಚುಗೆಗೆ ಪಾತ್ರವಾಗಿವೆ. ವಿಶೇಷವಾಗಿ ಗಡಿಗಿ ಲಸ್ಸಿ, ಗೋಡಂಬಿ ಜ್ಯೂಸ್ ಹಾಗೂ ಎಳನೀರು ದೂರದ ಊರುಗಳಿಂದಲೂ ಗ್ರಾಹಕರನ್ನು ಆಕರ್ಷಿಸುತ್ತಿವೆ. ಸಚಿವರು, ಶಾಸಕರು ಸೇರಿದಂತೆ ಹಲವು ಗಣ್ಯರು ಇವರ ಗ್ರಾಹಕರಾಗಿದ್ದಾರೆ.

ವ್ಯಾಪಾರದ ಜೊತೆಗೆ ಸಮಾಜಮುಖಿ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ನಾಗುಂಡಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಶಾಲಾ ಮಕ್ಕಳಿಗೆ ನೋಟ್‌ಬುಕ್ ಮತ್ತು ಪೆನ್ನುಗಳನ್ನು ವಿತರಿಸುವುದು, ಜನ್ಮದಿನಾಚರಣೆ ಕಾರ್ಯಕ್ರಮಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದು ಹಾಗೂ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಸಂಘಟನೆಗಳಿಗೆ ಸಹಕಾರ ನೀಡುತ್ತಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಚುಟುಕು ಸಾಹಿತ್ಯ ಪರಿಷತ್ತು ಸೇರಿದಂತೆ ವಿವಿಧ ಕನ್ನಡಪರ ಸಂಸ್ಥೆಗಳ ಚಟುವಟಿಕೆಗಳಿಗೆ ಬೆಂಬಲ ನೀಡುವ ಮೂಲಕ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಕೈಜೋಡಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಖ್ಯಾತ ವಕೀಲರಾದ ಬಸವರಾಜ್ ಗೌರಮಪೇಟ ಅವರು ಮೊಹಮ್ಮದ್ ಮಹಿಬೂಬ್ ನಾಗುಂಡಿ ಅವರನ್ನು ಸನ್ಮಾನಿಸಿ, ಅವರ ಪ್ರಾಮಾಣಿಕತೆ, ಗುಣಮಟ್ಟದ ಉತ್ಪನ್ನಗಳು ಹಾಗೂ ತಂದೆಯಿಂದ ಬಳುವಳಿಯಾಗಿ ಬಂದ ಉದ್ಯಮದ ಮೌಲ್ಯಗಳನ್ನು ಉಳಿಸಿಕೊಂಡು ಮುನ್ನಡೆಯುತ್ತಿರುವ ಬದ್ಧತೆಯನ್ನು ಶ್ಲಾಘಿಸಿದರು. ಈ ಸಂದರ್ಭದಲ್ಲಿ ಶ್ರೀ ಮಲ್ಲಿಕಾರ್ಜುನ ಪಾಟೀಲ್ ಉಪಸ್ಥಿತರಿದ್ದರು. ಕಲಾ ಸಂಕೂಲ ಸಂಸ್ಥೆಯ ಮಾರುತಿ ಬಡಿಗೇರ ಮಾತನಾಡಿ, ಉದ್ಯೋಗಿಗಳ ಕಾಳಜಿ ವಹಿಸುವುದರ ಜೊತೆಗೆ ಕನ್ನಡ ಸಾಹಿತ್ಯ ಮತ್ತು ಸಮಾಜಸೇವೆಗೆ ಕೊಡುಗೆ ನೀಡುತ್ತಿರುವ ಉದ್ಯಮಿಗಳನ್ನು ಗುರುತಿಸಿ ಗೌರವಿಸುವುದು ಮಹತ್ವದ ಕಾರ್ಯವಾಗಿದೆ.

ಮೊಹಮ್ಮದ್ ಮಹಿಬೂಬ್ ನಾಗುಂಡಿ ಅವರಿಗೆ ರಾಜ್ಯಮಟ್ಟದ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ತಿಳಿಸಿದರು.

ದೇವದುರ್ಗದ ಉದ್ಯಮಿಯೊಬ್ಬರು ರಾಜ್ಯಮಟ್ಟದ ಪ್ರಶಸ್ತಿಗೆ ಭಾಜನರಾಗಿರುವುದು ಪಟ್ಟಣದ ಜನತೆಗೆ ಹೆಮ್ಮೆಯ ಸಂಗತಿಯಾಗಿದ್ದು, ಅವರ ಸಾಧನೆಗೆ ಸಾರ್ವಜನಿಕರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

ಕಂಪ್ಲಿ ತಾಲ್ಲೂಕು ದ್ವಿತೀಯ ಕನ್ನಡ ಸಾಹಿತ್ಯ ಸಮ್ಮೇಳನ ನ.13ಕ್ಕೆ: ವೀರಶೈವ ಭವನದಲ್ಲಿ ಸಡಗರದ ಕನ್ನಡ ಹಬ್ಬ

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಇಲ್ಲಿನ ಪಟ್ಟಣದ ವೀರಶೈವ ಭವನದಲ್ಲಿ ನವೆಂಬರ್ 13ರಂದು ತಾಲ್ಲೂಕು ದ್ವಿತೀಯ ಕನ್ನಡ ಸಾಹಿತ್ಯ ಸಮ್ಮೇಳನವು ಅತ್ಯಂತ ಸಡಗರ-ಸಂಭ್ರಮದಿಂದ ಜರುಗಲಿದೆ ಎಂದು ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷರಾದ ಷಣ್ಮುಖಪ್ಪ ಚಿತ್ರಗಾರ ತಿಳಿಸಿದ್ದಾರೆ.

ಅಕ್ಷರ ಜಾತ್ರೆಯ ಸಂಪೂರ್ಣ ವಿವರ ಪ್ರಸಿದ್ಧ ಸಾಹಿತಿ ಬಂಗಿ ದೊಡ್ಡ ಮಂಜುನಾಥ ಅವರು ಈ ಬಾರಿಯ ಸಮ್ಮೇಳನದ ಅಧ್ಯಕ್ಷರಾಗಿ ಜವಾಬ್ದಾರಿ ವಹಿಸಲಿದ್ದಾರೆ. ನ.13ರ ಬೆಳಿಗ್ಗೆ 11 ಗಂಟೆಗೆ ಮಾನ್ಯ ಶಾಸಕರಾದ ಜೆ.ಎನ್. ಗಣೇಶ್ ಅವರು ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಬೆಳಿಗ್ಗೆ 7.30ಕ್ಕೆ ರಾಷ್ಟ್ರಧ್ವಜ, ಪರಿಷತ್ ಧ್ವಜ ಹಾಗೂ ನಾಡಧ್ವಜಗಳ ಆರೋಹಣ ನೆರವೇರಲಿದೆ. ಬೆಳಿಗ್ಗೆ 8.00 ಗಂಟೆಗೆ ಸಮ್ಮೇಳನಾಧ್ಯಕ್ಷರ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗಿದ್ದು, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ಶ್ರೀನಿವಾಸ್ ಅವರು ಚಾಲನೆ ನೀಡಲಿದ್ದಾರೆ.

ಸಮ್ಮೇಳನಾಧ್ಯಕ್ಷರ ಮೂರು ಪ್ರಮುಖ ಕೃತಿಗಳ ಬಿಡುಗಡೆ ನೆರವೇರಲಿದೆ. ನಾಡಿನ ಜ್ವಲಂತ ವಿಷಯಗಳಾದ ರೈತ,



ಷಣ್ಮುಖಪ್ಪ ಚಿತ್ರಗಾರ
ತಾಲೂಕು ಅಧ್ಯಕ್ಷರು ಕಸಾಪ

ಇತಿಹಾಸ, ಕವಿಗೋಷ್ಠಿ ಹಾಗೂ ಅಂಬೇಡ್ಕರ್ ಚಿಂತನೆಗಳ ಕುರಿತು ವೈವಿಧ್ಯಮಯ ವಿಚಾರಗೋಷ್ಠಿಗಳು ನಡೆಯಲಿವೆ. ಇದರೊಂದಿಗೆ ಸಾಹಿತ್ಯ, ಸಂಗೀತ ಮತ್ತು ಕರುನಾಡ ಸಂಸ್ಕೃತಿಯನ್ನು ಬಿಂಬಿಸುವ ಅದ್ಭುತ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾರ್ವಜನಿಕರ ಕಣ್ಮನ ಸೆಳೆಯಲಿವೆ.

ಕನ್ನಡ ನಾಡು, ನುಡಿ, ಸಂಸ್ಕೃತಿಯ ಈ ಮಹೋತ್ಸವಕ್ಕೆ ತಾಲ್ಲೂಕಿನ ಸಮಸ್ತ ಕನ್ನಡಾಭಿಮಾನಿಗಳು, ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ವಿನಂತಿಸಲಾಗಿದೆ.

ರಾಯಚೂರಿನಲ್ಲಿ ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದಿಂದ ಹಜರತ್ ಟಿಪ್ಪು ಸುಲ್ತಾನ್ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ರಾಯಚೂರು ನಗರದಲ್ಲಿ ಹಜರತ್ ಟಿಪ್ಪು ಸುಲ್ತಾನ್ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಟಿಪ್ಪು ಸುಲ್ತಾನ್ ಅವರ ಜೀವನ, ಸಾಧನೆ, ದೇಶಪ್ರೇಮ, ಧೈರ್ಯ ಮತ್ತು ಬ್ರಿಟಿಷರ ವಿರುದ್ಧ ನಡೆಸಿದ ಹೋರಾಟವನ್ನು ಸ್ಮರಿಸಲಾಯಿತು.



ದೇಶದ ಸ್ವಾತಂತ್ರ್ಯ ಮತ್ತು ಸ್ವಾಭಿಮಾನಕ್ಕಾಗಿ ಹೋರಾಡಿದ ಐತಿಹಾಸಿಕ ವ್ಯಕ್ತಿಗಳ ಆದರ್ಶಗಳನ್ನು ಇಂದಿನ ಯುವ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದು ಮುಖಂಡರು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷರಾದ ಎಲ್.ವಿ. ಸುರೇಶ್, ಜಿಲ್ಲಾಧ್ಯಕ್ಷರಾದ ರಾಮಕೃಷ್ಣ ಪ್ರಸಾದ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಕೃಷ್ಣ, ಮೈನಾರಿಟಿ ಕಮಿಟಿ ಅಧ್ಯಕ್ಷರಾದ ಅನ್ವರ್, ಮೈನಾರಿಟಿ ಕಮಿಟಿಯ ಗೌರವಾಧ್ಯಕ್ಷರಾದ ಜಲಾಲ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ರಾಯಚೂರು ನಗರದ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಸಾಮಾಜಿಕ ಕಾರ್ಯಕರ್ತರು, ಯುವಕರು ಹಾಗೂ ಸಮಸ್ತ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಜಾತಿ, ಧರ್ಮ, ಭಾಷೆ ಎಂಬ ಭೇದಭಾವಗಳನ್ನು ಮೀರಿ ಪರಸ್ಪರ ಗೌರವ, ಸಹೋದರತ್ವ, ಸಾಮಾಜಿಕ ಸಾಮರಸ್ಯ ಮತ್ತು ಐಕ್ಯತೆಯನ್ನು ಬೆಳೆಸುವ ಸಂದೇಶವನ್ನು ಕಾರ್ಯಕ್ರಮ ಸಾರಿತು.

ಟಿಪ್ಪು ಸುಲ್ತಾನ್ ಅವರ ಹೋರಾಟದ ಇತಿಹಾಸವನ್ನು ಸ್ಮರಿಸುವುದರೊಂದಿಗೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಮಾನತೆಯ ಮೌಲ್ಯಗಳನ್ನು ಎತ್ತಿಹಿಡಿಯುವ ಸಂಕಲ್ಪದೊಂದಿಗೆ ಜಯಂತಿ ಆಚರಣೆ ನಡೆಯಿತು.

ಅಕ್ಷರ ಲೋಕದ ಧ್ರುವತಾರೆ ಮೌಲಾನಾ ಆಜಾದ್: ರಾಷ್ಟ್ರೀಯ ಶಿಕ್ಷಣ ದಿನಾಚರಣೆಯ ವಿಶೇಷ ಚಿಂತನೆ

ನೈಜ್ಯ ದೆಸೆ ನ್ಯೂಸ್


ವಿಶೇಷ ವರದಿ: ಜಿಲಾನಸಾಬ್ ಬಡಿಗೇರ್

"ದೇಶದ ಭವಿಷ್ಯ ರೂಪಿಸುವ ಶಕ್ತಿ ಇರುವುದು ತರಗತಿಯ ನಾಲ್ಕು ಗೋಡೆಗಳ ಮಧ್ಯೆ ಮಾತ್ರ" ಎಂಬ ಮಾತಿದೆ. 1947ರಲ್ಲಿ ಭಾರತಕ್ಕೆ ಬ್ರಿಟಿಷರಿಂದ ಮುಕ್ತಿ ಸಿಕ್ಕಾಗ ದೇಶ ಎದುರಿಸುತ್ತಿದ್ದ ಅತಿ ದೊಡ್ಡ ಸವಾಲುಗಳಲ್ಲಿ ಬಡತನದಷ್ಟೇ ತೀವ್ರವಾಗಿದ್ದುದು ಅನಕ್ಷರತೆ.

ಆಗ ದೇಶದಲ್ಲಿದ್ದ ಒಟ್ಟಾರೆ ಅಕ್ಷರಸ್ಥರ ಪ್ರಮಾಣ ಕೇವಲ ಶೇ 12 ರಷ್ಟು ಮಾತ್ರ, ಅಂತಹ ಕಡು ಕತ್ತಲೆಯ ಸಂದರ್ಭದಲ್ಲಿ ಇಡೀ ದೇಶಕ್ಕೆ ಜ್ಞಾನದ ಬೆಳಕು ನೀಡಲು, ಆಧುನಿಕ ಭಾರತದ ಶೈಕ್ಷಣಿಕ ವ್ಯವಸ್ಥೆಗೆ ಭದ್ರ ಬುನಾದಿ ಹಾಕಿದ ಮಹಾ ಚೇತನ, ಸ್ವತಂತ್ರ ಭಾರತದ ಪ್ರಥಮ ಶಿಕ್ಷಣ ಸಚಿವ ಮೌಲಾನಾ ಅಬುಲ್ ಕಲಾಂ ಆಜಾದ್. ಪ್ರತಿ ವರ್ಷದ ನವೆಂಬರ್ 11 ರಂದು ಇವರ ಜನ್ಮದಿನವನ್ನು ದೇಶಾದ್ಯಂತ 'ರಾಷ್ಟ್ರೀಯ ಶಿಕ್ಷಣ ದಿನ'ವಾಗಿ ಅತ್ಯಂತ ಗೌರವದಿಂದ ಆಚರಿಸಲಾಗುತ್ತದೆ. ಕೇವಲ ರಾಜಕೀಯ ಮುತ್ಸದ್ದಿಯಷ್ಟೇ ಅಲ್ಲದೆ, ಪ್ರಖಂಡ ಪಂಡಿತ, ಚಿಂತಕ, ಧೀಮಂತ ಪತ್ರಕರ್ತ ಹಾಗೂ ಮುಂಚೂಣಿಯ ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಆಜಾದ್ ಅವರು ಭಾರತದ ಆಧುನಿಕ ಶಿಕ್ಷಣ ವ್ಯವಸ್ಥೆಯ ನಿಜವಾದ ಶಿಲ್ಪಿ.

ಆಧುನಿಕ ಶಿಕ್ಷಣದ ಭದ್ರ ಬುನಾದಿ ಮತ್ತು ಸಾಮಾಜಿಕ ಚಿಂತನೆ 1947 ರಿಂದ 1958 ರವರೆಗೆ ಸತತವಾಗಿ ದೇಶದ ಮೊದಲ ಶಿಕ್ಷಣ ಸಚಿವರಾಗಿ ಸೇವೆ ಸಲ್ಲಿಸಿದ ಮೌಲಾನಾ ಆಜಾದ್, ಅಕ್ಷರ ಕಲಿಕೆ ಮತ್ತು ಜ್ಞಾನಾರ್ಜನೆ ಕೇವಲ ಸಮಾಜದ ಕೆಲವು ವರ್ಗಗಳಿಗೆ ಮಾತ್ರ ಸೀಮಿತವಾಗಬಾರದು ಎಂದು ಬಲವಾಗಿ ನಂಬಿದ್ದರು. 14 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಪ್ರಾಥಮಿಕ ಶಿಕ್ಷಣ ಸಿಗಬೇಕೆಂದು ಸಂವಿಧಾನ ರಚನಾ ಸಮಿತಿಯಲ್ಲಿ ಪ್ರತಿಪಾದಿಸಿದ ಮೊದಲ ಧ್ವನಿ ಇವರದ್ದಾಗಿತ್ತು. ಕೇವಲ ಮಕ್ಕಳ ಶಿಕ್ಷಣ ಮಾತ್ರವಲ್ಲದೆ, ವಯಸ್ಕರ ಶಿಕ್ಷಣಕ್ಕಾಗಿ ಅವರು ತಂದ 'ಸಾಮಾಜಿಕ ಶಿಕ್ಷಣ' ಎಂಬ ಪರಿಕಲ್ಪನೆ ಅಪೂರ್ವವಾದದ್ದು. ಇದು ಕೇವಲ ಓದು-ಬರಹ ಕಲಿಸುವುದಕ್ಕೆ ಸೀಮಿತವಾಗಿರದೆ, ನಾಗರಿಕ ಪ್ರಜ್ಞೆ, ಆರೋಗ್ಯ, ಆರ್ಥಿಕ ಸ್ವಾವಲಂಬನೆ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಒಳಗೊಂಡಿತ್ತು.

ಗ್ರಾಮೀಣ ಭಾಗದ ಬಡ ಜನರಿಗೆ ಶೈಕ್ಷಣಿಕ ಅವಕಾಶಗಳನ್ನು ವಿಸ್ತರಿಸುವುದು ಮತ್ತು ಮಹಿಳಾ ಶಿಕ್ಷಣಕ್ಕೆ ಆದ್ಯತೆ ನೀಡುವುದರ ಮೂಲಕ ಸಮಾಜದಲ್ಲಿ ಸಮಾನತೆ ತರಲು ಅವರು ಶ್ರಮಿಸಿದರು. ಜಾಗತಿಕ ಮಟ್ಟದ ಉನ್ನತ ಸಂಸ್ಥೆಗಳ ಜನಕ ಇಂದು ಜಗತ್ತೇ ಭಾರತದ ತಂತ್ರಜ್ಞಾನ, ಎಂಜಿನಿಯರಿಂಗ್ ಹಾಗೂ ಸಂಶೋಧನಾ ಶಕ್ತಿಯನ್ನು ಕೊಂಡಾಡುತ್ತಿದೆ ಎಂದರೆ ಅದಕ್ಕೆ ಆಜಾದ್ ಅವರ ದೂರದೃಷ್ಟಿಯೇ ಕಾರಣ. ದೇಶಕ್ಕೆ ಉನ್ನತ ಗುಣಮಟ್ಟದ ತಾಂತ್ರಿಕ ಮತ್ತು ವೈಜ್ಞಾನಿಕ ಮನೋಭಾವದ ಅಗತ್ಯವಿದೆ ಎಂಬುದನ್ನು ಮನಗಂಡು ಅವರು ಕ್ರಾಂತಿಕಾರಿ ಸಂಸ್ಥೆಗಳನ್ನು ಹುಟ್ಟುಹಾಕಿದರು:



* ಭಾರತೀಯ ತಂತ್ರಜ್ಞಾನ ಸಂಸ್ಥೆಗಳು (ಖಚಖ): 1951 ರಲ್ಲಿ ದೇಶದ ಮೊದಲ ಐಐಟಿಯನ್ನು ಪಶ್ಚಿಮ ಬಂಗಾಳದ ಖರಗ್‌ಪುರದಲ್ಲಿ ಸ್ಥಾಪಿಸುವ ಮೂಲಕ ಭಾರತದ ತಾಂತ್ರಿಕ ಶಿಕ್ಷಣಕ್ಕೆ ಅಡಿಪಾಯ ಹಾಕಿದರು.

* ವಿಶ್ವವಿದ್ಯಾಲಯ ಧನಸಹಾಯ ಆಯೋಗ (UGC): ದೇಶದಾದ್ಯಂತ ಉನ್ನತ ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಳ್ಳಲು ಮತ್ತು ವಿಶ್ವವಿದ್ಯಾಲಯಗಳಿಗೆ ಧನಸಹಾಯದ ನೆರವು ನೀಡಲು 1953 ರಲ್ಲಿ ಈ ಸಂಸ್ಥೆಯನ್ನು ಅಸ್ತಿತ್ವಕ್ಕೆ ತಂದರು.

* ಸಂಸ್ಕೃತಿ ಮತ್ತು ಕಲೆಯ ಪ್ರೋತ್ಸಾಹ: ಕೇವಲ ವಿಜ್ಞಾನವಷ್ಟೇ ಅಲ್ಲ, ದೇಶದ ಸಂಸ್ಕೃತಿಯೂ ಬೆಳೆಯಬೇಕೆಂದು ಆಶಿಸಿದ ಅವರು ಸಾಹಿತ್ಯ ಅಕಾಡೆಮಿ, ಲಲಿತ ಕಲಾ ಅಕಾಡೆಮಿ ಹಾಗೂ ಸಂಗೀತ ನಾಟಕ ಅಕಾಡೆಮಿಗಳನ್ನು ಸ್ಥಾಪಿಸಿದರು. ಆ ಮೂಲಕ ಭಾರತೀಯ ಕಲೆ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದರು.

ಇಂದಿನ ಶಿಕ್ಷಣದ ಪ್ರಸ್ತುತತೆ ಮತ್ತು ಡಿಜಿಟಲ್ ಯುಗದ ಸವಾಲುಗಳು

ಮೌಲಾನಾ ಆಜಾದ್ ಅವರು ಅಂದು ಬಿತ್ತಿದ ಶಿಕ್ಷಣದ ಬೀಜ ಇಂದು ಹೆಮ್ಮರವಾಗಿದೆ. ಆದರೆ, ಇಂದಿನ 21ನೇ ಶತಮಾನದ ಡಿಜಿಟಲ್ ಯುಗದಲ್ಲಿ ಶಿಕ್ಷಣದ ಸ್ವರೂಪ ಮತ್ತು ಅದರ ಅಗತ್ಯತೆಗಳು ಸಂಪೂರ್ಣವಾಗಿ ಬದಲಾಗಿವೆ. ಕೃತಕ ಬುದ್ಧಿಮತ್ತೆ, ಆನ್‌ಲೈನ್ ಕಲಿಕೆ ಮತ್ತು ಜಾಗತಿಕ ಸ್ಪರ್ಧೆಯ ಈ ಕಾಲದಲ್ಲಿ ಆಜಾದ್ ಅವರ ತತ್ವಗಳು ಹೇಗೆ ಪ್ರಸ್ತುತವಾಗುತ್ತವೆ ಎಂಬುದನ್ನು ಗಮನಿಸಬೇಕಿದೆ.

* ಕಂಪ್ಯೂಟರ್ ಸೌಲಭ್ಯಗಳು ಮರೀಚಿಕೆಯಾಗಿವೆ. ಮೌಲಾನಾ ಆಜಾದ್ ಅವರು ಪ್ರತಿಪಾದಿಸಿದ "ಎಲ್ಲರಿಗೂ ಸಮಾನ ಶಿಕ್ಷಣ" ಎಂಬ ತತ್ವ ಜಾರಿಯಾಗಬೇಕಾದರೆ, ಈ ಡಿಜಿಟಲ್ ಕಂದಕವನ್ನು ಮೊದಲು ಮುಚ್ಚಬೇಕಿದೆ.

* ವೈಜ್ಞಾನಿಕ ಮನೋಭಾವದ ಪ್ರಸ್ತುತತೆ: ಇಂದಿನ ಸಮಾಜದಲ್ಲಿ ತಪ್ಪು ಮಾಹಿತಿ ಮತ್ತು ಮೌಢ್ಯಗಳು ಹೆಚ್ಚಾಗುತ್ತಿರುವಾಗ, ವಿದ್ಯಾರ್ಥಿಗಳಲ್ಲಿ ಪ್ರಶ್ನಿಸುವ ಗುಣ ಹಾಗೂ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ಶಿಕ್ಷಣದ ಅಗತ್ಯ ಹಿಂದೆಂದಿಗಿಂತಲೂ ಹೆಚ್ಚಾಗಿದೆ.

ಕೋಮು ಸೌಹಾರ್ದತೆಯ ಹರಿಕಾರ ಹಾಗೂ ಪತ್ರಿಕೋದ್ಯಮ ಬ್ರಿಟಿಷರ 'ಒಡೆದು ಆಳುವ' ನೀತಿಯನ್ನು ತೀವ್ರವಾಗಿ ವಿರೋಧಿಸಿದ ಆಜಾದ್, ಧರ್ಮದ ಆಧಾರದ ಮೇಲೆ ಭಾರತದ ವಿಭಜನೆಯಾಗುವುದನ್ನು ಕೊನೆಯವರೆಗೂ ಒಪ್ಪಿರಲಿಲ್ಲ. ಹಿಂದೂ-ಮುಸ್ಲಿಂ ಏಕತೆಯೇ ಭಾರತದ ಅತಿ ದೊಡ್ಡ ಶಕ್ತಿ ಎಂದು ನಂಬಿದ್ದ ಅವರು, ತಮ್ಮ 24ನೇ ವಯಸ್ಸಿನಲ್ಲೇ 'ಅಲ್-ಹಿಲಾಲ್' ಎಂಬ ಉರ್ದು ವಾರಪತ್ರಿಕೆಯನ್ನು ಆರಂಭಿಸಿ, ಅದರ ಮೂಲಕ ಯುವಕರಲ್ಲಿ ಸ್ವಾತಂತ್ರ್ಯದ ಕಿಚ್ಚು ಮತ್ತು ರಾಷ್ಟ್ರೀಯತೆಯನ್ನು ಬಿತ್ತಿದರು. ಇವರ ಅಪಾರ ದೇಶಸೇವೆಯನ್ನು ಪರಿಗಣಿಸಿ 1992 ರಲ್ಲಿ ಭಾರತ ಸರ್ಕಾರ ಇವರಿಗೆ ಮರಣೋತ್ತರವಾಗಿ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಭಾರತ ರತ್ನ' ನೀಡಿ ಗೌರವಿಸಿತು.

2008 ರಿಂದ ಜಾರಿಗೆ ಬಂದ ಈ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯು ಕೇವಲ ಒಂದು ಔಪಚಾರಿಕ ದಿನಾಚರಣೆಯಾಗಬಾರದು. ಶಿಕ್ಷಣವು ಕೇವಲ ಬದುಕು ಕಟ್ಟಿಕೊಳ್ಳುವ ಸಾಧನವಾಗದೆ, ಮನುಷ್ಯನನ್ನು ಮಾನವೀಯತೆಯುಳ್ಳ ಜವಾಬ್ದಾರಿಯುತ ನಾಗರಿಕನನ್ನಾಗಿ ರೂಪಿಸಬೇಕು ಎಂಬುದು ಆಜಾದ್ ಅವರ ಆಶಯವಾಗಿತ್ತು. ಗ್ರಾಮೀಣ ಭಾಗದ ಶಾಲಾ ಸೌಲಭ್ಯಗಳ ಕೊರತೆ ಮತ್ತು ಹೆಣ್ಣುಮಕ್ಕಳ ಶಿಕ್ಷಣದ ಹಾದಿಯಲ್ಲಿರುವ ಅಡೆತಡೆಗಳನ್ನು ನಿವಾರಿಸಿ, ದೇಶದ ಕೊನೆಯ ಮಗುವಿಗೂ ಗುಣಮಟ್ಟದ ಶಿಕ್ಷಣ ತಲುಪಿಸುವ ಸಂಕಲ್ಪ ಮಾಡುವುದೇ ನಾವು ಆ ಮಹಾ ಚೇತನಕ್ಕೆ ಸಲ್ಲಿಸುವ ನಿಜವಾದ ಗೌರವವಾಗಿದೆ.

ನೇಮಕಾತಿ ಪ್ರಕಟಣೆ

ಇಂಡಿಯನ್ ಬ್ಯಾಂಕ್ ನೇಮಕಾತಿ 2026–1500 ಅಪ್ರೆಂಟಿಸï (Apprentice) ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಇಂಡಿಯನ್ ಬ್ಯಾಂಕ್ ನೇಮಕಾತಿ 2026: 1500 ಅಪ್ರೆಂಟಿಸ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಇಂಡಿಯನ್ ಬ್ಯಾಂಕ್ ತನ್ನ ನವೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅಪ್ರೆಂಟಿಸ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಕೋರಿದೆ. ಅಖಿಲ ಭಾರತ ಮಟ್ಟದಲ್ಲಿ ಸರ್ಕಾರಿ ವಲಯದಲ್ಲಿ ವೃತ್ತಿಜೀವನವನ್ನು ರೂಪಿಸಿಕೊಳ್ಳಲು ಬಯಸುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 25–ನವೆಂಬರ್–2026 ರಂದು ಅಥವಾ ಅದಕ್ಕೂ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಸಂಸ್ಥೆಯ ಹೆಸರು: ಇಂಡಿಯನ್ ಬ್ಯಾಂಕ್ (Indian Bank) ಹುದ್ದೆಗಳ ಸಂಖ್ಯೆ: 1500 ಉದ್ಯೋಗ ಸ್ಥಳ: ಅಖಿಲ ಭಾರತ (ಭಾರತದಾದ್ಯಂತ) ಹುದ್ದೆಯ ಹೆಸರು: ಅಪ್ರೆಂಟಿಸ್ (Apprenticಜ) ವೇತನ: ತಿಂಗಳಿಗೆ ರೂ. 12,300–15,000/– ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25–ನವೆಂಬರ್–2026. ಅಧಿಕೃತ ವೆಬ್‌ಸೈಟ್: indianbank.in.

1ನೇ ಪುಟದಿಂದ....

ತಾಲೂಕಿಗೆ ಒಬ್ಬ ಸಹಾಯಕ ಆಯುಕ್ತರ ಶ್ರೇಣಿಯ ಅಧಿಕಾ–ರಿಯನ್ನು ಆರ್‌ಒಗಳನ್ನಾಗಿ ನೇಮಿಸಬೇಕು. 10ಕ್ಕಿಂತ ಹೆಚ್ಚು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿರುವ ತಾಲೂಕುಗಳಲ್ಲಿ ಅಗತ್ಯವಿದ್ದರೆ ಇಬ್ಬರು ಆರ್‌ಒಗಳನ್ನು ನೇಮಿಸಬಹುದಾಗಿದೆ. ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರ್ ಹೊರತುಪಡಿಸಿ, ತಹಸೀಲ್ದಾರ್ ಶ್ರೇಣಿಯ ಅಧಿಕಾರಿಗಳನ್ನು ಎಆರ್‌ಒಗಳಾಗಿ ನೇಮಿಸಲು ಸೂಚಿಸಲಾಗಿದೆ. ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಪ್ರತಿ 15 ಕ್ಷೇತ್ರಗಳಿಗೆ ಒಬ್ಬ ತಹಸೀಲ್ದಾರ್ ಅಥವಾ ಸಮಾನ ಶ್ರೇಣಿಯ ಅಧಿಕಾರಿಯನ್ನು ಆರ್‌ಒಗಳಾಗಿ ನೇಮಿಸಬೇಕು. ಉಪ ತಹಸೀಲ್ದಾರ್ ಅಥ–ವಾ ಸಮಾನ ಶ್ರೇಣಿಯ ಅಧಿಕಾರಿಗಳನ್ನು ಎಆರ್‌ಒಗಳಾಗಿ ನಿಯೋಜಿಸಬೇಕು. ಅನುಭವ ಇರುವ ಸಿಬ್ಬಂದಿಗೆ ಆದ್ಯತೆ ಚುನಾವಣಾ ಕಾರ್ಯಕ್ಕೆ ನಿಯೋಜಿಸುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಹಿಂದಿನ ಚುನಾವಣಾ ಅನುಭವ ಇರುವಂತೆ ನೋಡಿಕೊಳ್ಳಬೇಕು ಎಂದು ಆಯೋಗ ಸೂಚಿಸಿದೆ. ಚುನಾವಣಾ ಸಿದ್ಧತೆಯ ಆರಂಭದಿಂದ ಮತದಾನ ಮತ್ತು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ವಿವಿಧ ಹಂತಗಳಲ್ಲಿ ಕಾರ್ಯನಿರ್ವಹಿಸುವ ಎಲ್ಲ ಸಿಬ್ಬಂದಿಗೂ ತರಬೇತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ. ಅಲ್ಲದೆ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾದ ಅಧಿಕಾ–ರಿಗಳನ್ನು ರಾಜ್ಯ ಚುನಾವಣಾ ಆಯೋಗದ ಪೂರ್ವಾನುಮತಿ ಇಲ್ಲದೆ ಬದಲಾಯಿಸಬಾರದು. ಅನಿವಾರ್ಯ ಸಂದರ್ಭದಲ್ಲಿ ಆಯೋಗದ ಅನುಮತಿ ಪಡೆದ ಬಳಿಕವೇ ಬದಲಾವಣೆ ಮಾಡಬೇಕು ಎಂದು ಸ್ಪಷ್ಟಪಡಿಸಲಾಗಿದೆ. ಡಿಸೆಂಬರ್‌ನಲ್ಲಿ ವೇಳಾಪಟ್ಟಿ ಸಾಧ್ಯತೆ ಇತ್ತೀಚೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಅವರು, ಜನವರಿಯಲ್ಲಿ ಚುನಾವಣೆ ನಡೆಸುವ ಉದ್ದೇಶವಿದ್ದರೆ ಡಿಸೆಂಬರ್ ಮಧ್ಯಭಾಗದಲ್ಲಿ ರಾಜ್ಯ ಚುನಾವಣಾ ಆಯೋಗ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸುವ ಸಾಧ್ಯತೆ ಇದೆ ಎಂದು ಸೂಚಿಸಿದ್ದರು. ಇದೀಗ ಆರ್‌ಒ ಮತ್ತು ಎಆರ್‌ಒಗಳ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಆಯೋಗ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿರುವುದು ಚುನಾವಣಾ ಸಿದ್ಧತೆಗಳು ಮುಂದುವರಿದಿರುವುದಕ್ಕೆ ಮತ್ತಷ್ಟು ಸೂಚನೆಯಾಗಿದೆ. ಮತಪೆಟ್ಟಿಗೆಗಳ ಸಿದ್ಧತೆ ಮೂಲಗಳ ಪ್ರಕಾರ, ರಾಜ್ಯ ಚುನಾವಣಾ ಆಯೋಗ ರಾಜ್ಯಾದ್ಯಂತ ಲಭ್ಯವಿರುವ ಮತಪೆಟ್ಟಿಗೆಗಳ ಪರಿಶೀಲನೆ ಮತ್ತು ಆಡಿಟ್ ಪೂರ್ಣಗೊಳಿಸಿದೆ. ಸುಮಾರು 80 ಕೋಟಿಗೂ ಅಧಿಕ ಮೌಲ್ಯದ ಮತಪೆಟ್ಟಿಗೆಗಳು ಮರುಬಳಕೆಗೆ ಯೋಗ್ಯ ಸ್ಥಿತಿಯಲ್ಲಿವೆ ಎಂದು ತಿಳಿದುಬಂದಿದೆ. ಇದರ ಜೊತೆಗೆ, ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸಲು ಅಗತ್ಯವಿರುವ ಹೆಚ್ಚುವರಿ ಮತಪೆಟ್ಟಿಗೆಗಳು ಹಾಗೂ ಇತರ ಚುನಾವಣಾ ಸಾಮಗ್ರಿಗಳ ಖರೀದಿಗಾಗಿ ರಾಜ್ಯ ಸರ್ಕಾರ ಇತ್ತೀಚೆಗೆ ರಾಜ್ಯ ಚುನಾವಣಾ ಆಯೋಗಕ್ಕೆ 125 ಕೋಟಿ ಬಿಡುಗಡೆ ಮಾಡಿದೆ ಎನ್ನಲಾಗಿದೆ. ಒಟ್ಟಿನಲ್ಲಿ, ಜನವರಿ 2027ರ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳ ನೇಮಕ, ತರಬೇತಿ, ಮತಪೆಟ್ಟಿಗೆಗಳ ಸಿದ್ಧತೆ ಹಾಗೂ ಚುನಾವಣಾ ಸಾಮಗ್ರಿಗಳ ವ್ಯವಸ್ಥೆ ಸೇರಿದಂತೆ ಹಲವು ಹಂತಗಳಲ್ಲಿ ರಾಜ್ಯ ಚುನಾವಣಾ ಆಯೋಗ ಸಿದ್ಧತೆ ಆರಂಭಿಸಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿಗೆ ಡಾ. ರಜಾಕ್ ಉಸ್ತಾದ್ ಸೇರಿದಂತೆ ಇಬ್ಬರು ಶಿಕ್ಷಣ ತಜ್ಞರ ನೇಮಕ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕರ್ನಾಟಕ ರಾಜ್ಯದ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಬೆಳವಣಿಗೆಯಾಗಿದ್ದು, ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿಗೆ ಇಬ್ಬರು ಶಿಕ್ಷಣ ತಜ್ಞರನ್ನು ನೂತನ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಧಿನಿಯಮ–2010ರ ನಿಯಮಗಳ ಅನ್ವಯ ಈ ನೇಮಕಾತಿ ಪ್ರಕ್ರಿಯೆ ನಡೆದಿದ್ದು, ಈ ಹಿಂದೆ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 459 ಯುಬಿವಿ 2023, ದಿನಾಂಕ 10–06–2024ರ ಮೂಲಕ ಸದಸ್ಯರಾಗಿ ನೇಮಕಗೊಂಡಿದ್ದ ಡಾ. ಹೆಚ್.ಸಿ. ಬೋರಲಿಂಗಯ್ಯ ಹಾಗೂ ಪ್ರೊ. ಎಸ್.ಎ. ಪಾಟೀಲ್ ಅವರು 70 ವರ್ಷ ವಯಸ್ಸು ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ತೆರವಾಗಿದ್ದ ಎರಡು ಸದಸ್ಯ ಸ್ಥಾನಗಳಿಗೆ ಹೊಸ ನೇಮಕಾತಿ ಮಾಡಲಾಗಿದೆ.



ಈ ತೆರವಾದ ಸ್ಥಾನಗಳಿಗೆ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಧಿನಿಯಮ–2010ರ ಪ್ರಕರಣ 13ರ ಅಡಿಯಲ್ಲಿ ಉಳಿದ ಅವಧಿಗೆ ಅಂದರೆ 09–06–2029ರವರೆಗೆ ಕೆಳಕಂಡ ಇಬ್ಬರು ಶಿಕ್ಷಣ ತಜ್ಞರನ್ನು ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ನೂತನ ಸದಸ್ಯರ ವಿವರ:
1\. ಡಾ. ರಜಾಕ್ ಉಸ್ತಾದ್
* ವಿದ್ಯಾರ್ಹತೆ: ಎಂ.ಎಸ್ಸಿ., ಪಿಎಚ್.ಡಿ.
* ವಿಳಾಸ: ಡ್ಯಾಡಿ ಕಾಲೋನಿ, ರಾಯಚೂರು.
2\. ಡಾ. ಹೆಚ್.ಜೆ. ಜಯಕೃಷ್ಣ
* ವಿದ್ಯಾರ್ಹತೆ: MDS, PGDM-LE (NLSIU), FDS, RCPS (Glasg).
* ಹುದ್ದೆ: ಸಿಂಡಿಕೇಟ್ ಸದಸ್ಯರು, ಬೆಂಗಳೂರು ವಿಶ್ವವಿದ್ಯಾಲಯ.
* ವಿಳಾಸ: ಬೆಂಗಳೂರು.

ರಾಜ್ಯದ ಉನ್ನತ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವುದು, ವಿಶ್ವವಿದ್ಯಾಲಯಗಳ ಶೈಕ್ಷಣಿಕ ಚಟುವಟಿಕೆಗಳಿಗೆ ಮಾರ್ಗದರ್ಶನ ನೀಡುವುದು, ಉನ್ನತ ಶಿಕ್ಷಣದ ಗುಣಮಟ್ಟ ಹೆಚ್ಚಿಸುವುದು, ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿಗಳಿಗೆ ಪೂರಕವಾದ ನೀತಿ ನಿರೂಪಣೆಯಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಪ್ರಮುಖ ಪಾತ್ರ ವಹಿಸುತ್ತದೆ.

ವಿಶೇಷವಾಗಿ ರಾಯಚೂರು ಜಿಲ್ಲೆಯ ಡಾ. ರಜಾಕ್ ಉಸ್ತಾದ್ ಅವರು ರಾಜ್ಯಮಟ್ಟದ ಪ್ರಮುಖ ಉನ್ನತ ಶಿಕ್ಷಣ ಪರಿಷತ್ತಿಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವುದು ಜಿಲ್ಲೆಯ ಶೈಕ್ಷಣಿಕ ವಲಯದಲ್ಲಿ ಗಮನಾರ್ಹ ಬೆಳವಣಿಗೆಯಾಗಿದೆ. ಇವರ ನೇಮಕಾತಿಯಿಂದ ಕಲ್ಯಾಣ ಕರ್ನಾಟಕ ಭಾಗದ ಉನ್ನತ ಶಿಕ್ಷಣದ ಸಮಸ್ಯೆಗಳು, ಗ್ರಾಮೀಣ ವಿದ್ಯಾರ್ಥಿಗಳ ಶೈಕ್ಷಣಿಕ ಅವಕಾಶಗಳು, ವಿಶ್ವವಿದ್ಯಾಲಯಗಳ ಅಭಿವೃದ್ಧಿ ಹಾಗೂ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸವಾಲುಗಳಿಗೆ ಹೆಚ್ಚಿನ ಪ್ರಾತಿನಿಧ್ಯ ಮತ್ತು ಗಮನ ದೊರೆಯುವ ನಿರೀಕ್ಷೆಯಿದೆ.

ಸರ್ಕಾರದ ಆದೇಶದಂತೆ ಈ ನೇಮಕಾತಿ ತಕ್ಷಣದಿಂದ ಜಾರಿಗೆ ಬಂದಿದ್ದು, ನೂತನ ಸದಸ್ಯರು 09 ಜೂನ್ 2029ರವರೆಗೆ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಲಿದ್ದಾರೆ. ರಾಯಚೂರು ಜಿಲ್ಲೆಯ ಶೈಕ್ಷಣಿಕ ವಲಯಕ್ಕೆ ಹೆಮ್ಮೆಯ ಕ್ಷಣವಾಗಿರುವ ಈ ನೇಮಕಾತಿಗೆ ಜಿಲ್ಲೆಯ ಶಿಕ್ಷಣ ಪ್ರೇಮಿಗಳು, ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳು ಹಾಗೂ ವಿವಿಧ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

ಸಿಂಧನೂರಿನ ಅಭಯ್ ಶೇಟ್ ಇವರಿಂದ ಕಾರುಣ್ಯ ಆಶ್ರಮದಲ್ಲಿನ ಆಶ್ರಯದಾತರುಗಳಿಗೆ ಮತ್ತು ಸಿಬ್ಬಂದಿಗಳಿಗೆ ಹೊಸವಸ್ತ್ರಗಳನ್ನು ವಿತರಣೆ ಮಾಡುವ ಮೂಲಕ ದೀಪಾವಳಿ ಹಬ್ಬದ ಆಚರಣೆ



ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಉದ್ಯಮಿಗಳಾದ ಶ್ರೀಮತಿ ಸ್ವಪ್ನಾ ಶ್ರೀ ಅಭಯ್ ಶೇಟ್ ಇವರಿಂದ ಪ್ರತಿ ವರ್ಷವೂ ಕೂಡ ದೀಪಾವಳಿ ಹಬ್ಬವನ್ನು ಸಿಂಧನೂ–ರಿನ ಕರುಣೆಯ ಕಾರುಣ್ಯ ಕುಟುಂಬವಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಶ್ರಯ ಪಡೆದಿರುವ ಆಶ್ರಯದಾತರುಗಳಿಗೆ ಹಾಗೂ ಅಲ್ಲಿನ ಸೇವಾ ಸಿಬ್ಬಂದಿಗಳಿಗೆ ಹೊಸ ವಸ್ತ್ರಗಳನ್ನು ವಿತರಣೆ ಮಾಡುವ ಮೂಲಕ ದೀಪಾವಳಿ ಹಬ್ಬವನ್ನು ಆಚರಿಸುವುದು ಸಂಪ್ರದಾಯವಾಗಿದೆ.

ಈ ಸಂದರ್ಭದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ನಮ್ಮ ಸಂಸ್ಥೆಯ ಮಾರ್ಗದರ್ಶಕರು ಕರುಣಾಮಯಿಗಳಾದ ಅಭಯ್ ಶೇಟ್ ಮತ್ತು ಅವರ ಮಗನಾದ ಯಶ್ ಇವರು ಪ್ರತಿವರ್ಷ ದೀಪಾವಳಿ ಹಬ್ಬವನ್ನು ಆಶ್ರಯದಾತರುಗಳಿಗೆ ಇಷ್ಟವಾದ ಹೊಸ ವಸ್ತುಗಳನ್ನು ವಿತರಿಸಿ ಅಲ್ಲಿನ ಸಿಬ್ಬಂದಿಗಳಿಗೂ ಕೂಡ ಹೊಸ ವಸ್ತ್ರಗಳನ್ನು ಹಾಗೂ ಸಿಹಿ ತಿಂಡಿಗಳನ್ನು ವಿತರಿಸುವ ಮೂಲಕ ಆಚರಿಸುತ್ತಿರುವ ಈ ಕುಟುಂಬದ ಸಂಪ್ರದಾಯ ಮಾನವೀಯತೆಗೆ ಶೋಭೆ ತರುವಂತದ್ದು ಮತ್ತು ವಿಶೇಷವಾಗಿ ಈ ಕುಟುಂಬದ ಯಾವುದೇ ಕಾರ್ಯಕ್ರಮವನ್ನು ಕಾರುಣ್ಯ ಆಶ್ರಮದಲ್ಲಿರುವ ಎಲ್ಲಾ ಹಿರಿಯರು ಕೂಡ ನಮ್ಮ ಕುಟುಂಬದ ಹಿರಿಯರ ಸಮಾನರು ಮತ್ತು ವಯಸ್ಕರ ಬುದ್ಧಿಮಾಂದ್ಯರು.

ನಮ್ಮ ಕುಟುಂಬದ ಮಕ್ಕಳ ಸಹೋದರ ಸಹೋದರಿಯರ ಸಮಾನರು ಎನ್ನುವ ಮನೋಭಾವನೆಯನ್ನು ಇಟ್ಟುಕೊಂಡಿರುವ ಈ ಕುಟುಂಬ ನಮ್ಮ ಕಲ್ಯಾಣ ಕರ್ನಾಟಕದ ಕರುಣಾಮಯಿ ಕುಟುಂಬವಾಗಿದೆ. ಇಂದಿನ ನಮ್ಮ ಅಭಯ್ ಶೇಟ್ ಅವರ ಕುಟುಂಬಕ್ಕೆ ಸಕಲ ದೇವಾನುದೇವತೆಗಳು ಆ ಭಗವಂತ ಸಕಲೈಶ್ವರ್ಯ ಸಿರಿ ಸಂಪತ್ತು ಆಯಸ್ಸು ಆಯುರಾರೋಗ್ಯ ಸುಖ ಶಾಂತಿ ನೆಮ್ಮದಿಯನ್ನು ಕರುಣಿಸಲಿ ಎನ್ನುವ ವಿಶೇಷ ಪ್ರಾರ್ಥನೆಯೊಂದಿಗೆ ಯಶ್ ಶೇಟ್ ಅವರ ಕುಟುಂಬಕ್ಕೆ ಹಾಗೂ ಸಮಸ್ತ ನಾಡಿನ ಜನತೆಗೆ ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು ಕೋರುತ್ತಿದ್ದೇವೆ ಎಂದು ಮಾತನಾಡಿ ಅಭಯ್ ಶೇಟ್ ಅವರ ಕುಟುಂಬಕ್ಕೆ ಧನ್ಯವಾದಗಳನ್ನು ತಿಳಿಸಿದರು. ಈ ಸಮಯದಲ್ಲಿ ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಮರಿಯಪ್ಪ.ವಿದ್ಯಾಶ್ರೀ. ಶಂಕ್ರಮ್ಮ ಶರಣು ಸ್ವಾಮಿ. ಬಸವ ಸ್ವಾಮಿ. ಹಾಗೂ ಎಲ್ಲಾ ಆಶ್ರಯದಾತರುಗಳು ಹೊಸ ಬಟ್ಟೆಗಳನ್ನು ಧರಿಸಿ ದೀಪಾವಳಿಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಿದರು.

ಕಲ್ಲೂರು ಗ್ರಾಮದಲ್ಲಿ ಟಿಪ್ಪು ಸುಲ್ತಾನ್ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ಸಿರವಾರ: ತಾಲೂಕಿನ ಕಲ್ಲೂರು ಗ್ರಾಮದಲ್ಲಿ ಹಜರತ್ ಟಿಪ್ಪು ಸುಲ್ತಾನ್ ಜಯಂತಿಯನ್ನು ಗ್ರಾಮಸ್ಥರ ಸಮ್ಮುಖದಲ್ಲಿ ಸೌಹಾರ್ದತೆ ಹಾಗೂ ಭಾವೈಕ್ಯತೆಯೊಂದಿಗೆ ಅಥ–ರ್ಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಸಾಮಾಜಿಕ ಸಮಾನತೆ, ಕಾಯಕ ನಿಷ್ಠೆ ಹಾಗೂ ಮಾನವೀಯ ಮೌಲ್ಯಗಳನ್ನು ಸಾರಿದ ಅಂಬಿಗರ ಚೌಡಯ್ಯನವರ ಮೂರ್ತಿಗೆ ಪುಷ್ಪಮಾಲೆ ಅರ್ಪಿಸಿ ಗೌರವ ಸಲ್ಲಿಸಲಾಯಿತು. ಬಳಿಕ ಮೈಸೂರಿನ ಇತಿಹಾಸದಲ್ಲಿ ತಮ್ಮದೇ ಆದ ಸ್ಥಾನ ಪಡೆದಿರುವ ಹಜರತ್ ಟಿಪ್ಪು ಸುಲ್ತಾನ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಹನೀಯರ ಜಯಂತಿಗಳು ಸಮಾಜದಲ್ಲಿ ಏಕತೆ, ಸಹೋದರತ್ವ, ಪರಸ್ಪರ ಗೌರವ ಮತ್ತು ಸೌಹಾರ್ದತೆಯ ಸಂದೇಶವನ್ನು ಸಾರುವ ಮಹತ್ವದ ಸಂದರ್ಭಗಳಾಗಿವೆ ಎಂಬ ಭಾವನೆ ವ್ಯಕ್ತವಾಯಿತು.

ವಿವಿಧ ಸಮುದಾಯಗಳ ಜನರು ಒಗ್ಗಟ್ಟಿನಿಂದ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಸಾಮಾಜಿ–ಕ ಸಾಮರಸ್ಯಕ್ಕೆ ಮತ್ತಷ್ಟು ಬಲ ನೀಡುತ್ತದೆ ಎಂಬುದು ಕಾರ್ಯಕ್ರಮದ ವಿಶೇಷವಾಗಿತ್ತು. ಕಾರ್ಯಕ್ರಮದಲ್ಲಿ ಸಬ್ಜಲಿ ಸಾಬ್ ಕಲ್ಲೂರ್,ಜಾಹಿರ್ ಸಾಹುಕಾರ, ಹಜರತ್ ಅಲಿ, ಮುಕ್ತಾರ್, ಯೇಸುರಾಜ್, ಅಬ್ದುಲ್ ಕಹೀಮ್, ಹುಸೇನ್ ಬಾಷಾ ಸೇರಿದಂತೆ ಇನ್ನಿತರ ಗ್ರಾಮಸ್ಥರು ಉಪಸ್ಥಿತರಿದ್ದರು. ಕಲ್ಲೂರು ಗ್ರಾಮದಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ, ಸೌಹಾರ್ದತೆ ಹಾಗೂ ಭಾವೈಕ್ಯತೆಯ ವಾತಾವರಣದಲ್ಲಿ ಜಯಂತಿ ಆಚ–ರಣೆಗೊಂಡಿದ್ದು, ಗ್ರಾಮಸ್ಥರ ಒಗ್ಗಟ್ಟು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ಕಲ್ಲೂರು ಗ್ರಾಮದ ಬೆಟ್ಟದ ಭೀಮರಾಯ ದೇವಸ್ಥಾನದ ರಥೋತ್ಸವಕ್ಕೆ ಭಕ್ತಸಾಗರ!

ನೈಜ್ಯ ದೆಸೆ ನ್ಯೂಸ್

ಸಿರವಾರ: ತಾಲೂಕಿನ ಕಲ್ಲೂರು ಗ್ರಾಮದ ಪ್ರಸಿದ್ಧ ಬೆಟ್ಟದ ಭೀಮರಾಯ ದೇವಸ್ಥಾನದ ರಥೋತ್ಸವವು ಸಾವಿರಾರು ಭಕ್ತರ ಅಪಾರ ಜನಸ್ತೋಮದ ನಡುವೆ ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಸಂಜೆಯ ವೇಳೆಯಲ್ಲಿ ಬೆಟ್ಟದ ಮೇಲಿರುವ ದೇವಸ್ಥಾನದಿಂದ ಸುಂದರವಾಗಿ ಅಲಂಕೃತಗೊಂಡ ರಥವು ಭಕ್ತರ ಜಯಘೋಷದ ನಡುವೆ ಕೆಳಗಿಳಿದು ಸಾಗಿತು. ಹೂವು, ತೋರಣ ಹಾಗೂ ಬಣ್ಣಬಣ್ಣದ ವಿದ್ಯುತ್ ದೀಪಗಳಿಂದ ಅಲಂಕ–ರಿಸಲಾಗಿದ್ದ ರಥವು ಭಕ್ತರ ಕಣ್ಮನ ಸೆಳೆಯಿತು.

ರಥಕ್ಕೆ ಕೇಸರಿ ಧ್ವಜಗಳನ್ನು ಕಟ್ಟಲಾಗಿದ್ದು, ಇಡೀ ದೇವಸ್ಥಾನದ ಪರಿಸರದಲ್ಲಿ ಹಬ್ಬದ ಸಂಭ್ರಮ ಮನೆಮಾಡಿತ್ತು. ರಥೋತ್ಸವವನ್ನು ಕಣ್ತುಂಬಿಕೊಳ್ಳಲು ಸುತ್ತಮುತ್ತಲಿನ



ಗ್ರಾಮಗಳಿಂದ ಸಾವಿರಾರು ಭಕ್ತರು ಆಗಮಿಸಿದ್ದರು. ಬೆಟ್ಟದ ಮೇಲಿನಿಂದ ಕೆಳಗಿನವರೆಗೆ ಭಕ್ತರ ಜನಸಂದಣಿ ಕಂಡುಬಂದಿತು. ದೇವಸ್ಥಾನದ ಆವರಣವನ್ನು ಬಣ್ಣಬಣ್ಣದ ವಿದ್ಯುತ್ ದೀಪಗಳು ಹಾಗೂ ಕೇಸರಿ ತೋರಣಗಳಿಂದ ಅಲಂಕರಿಸಲಾಗಿತ್ತು.

ಭಕ್ತರು ಭಕ್ತಿಭಾವದಿಂದ ರಥವನ್ನು ಎಳೆದು ತಮ್ಮ ಹರಕೆಗಳನ್ನು ಸಲ್ಲಿಸಿ ಸಂಭ್ರಮಿಸಿದರು. ಮಹಿಳೆಯರು, ಮಕ್ಕಳು, ಯುವಕರು ಹಾಗೂ ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದು ವಿಶೇಷವಾಗಿತ್ತು. ರಥೋತ್ಸವದ ಸಂದರ್ಭದಲ್ಲಿ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲಾಗಿತ್ತು.

ಕಲ್ಲೂರು ಗ್ರಾಮದ ಧಾರ್ಮಿಕ ಪರಂಪರೆ, ಭಕ್ತಿ ಮತ್ತು ಸಾಂಸ್ಕೃತಿಕ ವೈಭವವನ್ನು ಪ್ರತಿಬಿಂಬಿಸಿದ ಈ ರಥೋತ್ಸವವು ಗ್ರಾಮಸ್ಥರಲ್ಲಿ ಸಂಭ್ರಮದ ವಾತಾವರಣ ಮೂಡಿಸಿತು. ಈ ಸಂದರ್ಭದಲ್ಲಿ ದೇವಸ್ಥಾನದ ಬೆಟ್ಟದ ಮಾರುತಿಯ ಪೂಜಾರಿ ವೆಂಕಟೇಶ ಪೂಜಾರಿ,, ಪ್ರಾಣೇಶ್ ಪೂಜಾರಿ, ಹನುಮೇಶ್ ಪೂಜಾರಿ , ಹಾಗೂ ದೇವಸ್ಥಾನದ ಸೇವಕರಾದ ಕೃಷ್ಣಮೂರ್ತಿ, ಕೆ. ಆಂಜನೇಯ್ಯ ಸೇರಿದಂತೆ ಹಲವಾರು ಭಕ್ತಾದಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಕಡೇಕೊಪ್ಪ ಗ್ರಾಮದಲ್ಲಿ ಸಗಣಿ ಪಾಂಡವರಿಗೆ ಮಹಿಳೆಯರಿಂದ ವಿಶೇಷ ಪೂಜೆ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಉತ್ತರ ಕರ್ನಾಟಕದ ಗ್ರಾಮೀಣ ಭಾಗದಲ್ಲಿ ಬಲಿಪಾಡ್ಯ ದಿನದಂದು ವಿಶಿಷ್ಟ ಸಂಪ್ರದಾಯವೊಂದು ಮನೆಮನೆಗಳಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತದೆ. ಕುಷ್ಟಗಿ ತಾಲೂಕಿನ ಕಡೇಕೊಪ್ಪ ಗ್ರಾಮದಲ್ಲಿಯೂ ಗೋವಿನ ಸಗಣಿಯಿಂದ ಪಾಂಡವರ ಮೂರ್ತಿಗಳನ್ನು ತಯಾರಿಸಿ ಮಹಿಳೆಯರು ವಿಶೇಷ ಪೂಜೆ ಸಲ್ಲಿಸುವ ಮೂಲಕ ಸಂಪ್ರದಾಯವನ್ನು ಮುಂದುವರಿಸಿದ್ದಾರೆ.

ಗ್ರಾಮದ ಮನೆಗಳ ಮುಂದೆ ಗೋವಿನ ಸಗಣಿಯಿಂದ ಸುಂದರವಾಗಿ ರೂಪಿಸಲಾದ ಪಾಂಡವರ ಮೂರ್ತಿಗಳು ಗಮನ ಸೆಳೆಯುತ್ತಿವೆ.



ಮಹಿಳೆಯರು ಈ ಸಗಣಿ ಪಾಂಡವರಿಗೆ ನೈವೇದ್ಯ ಅರ್ಪಿಸಿ, ಆರತಿ ಬೆಳಗುವ ಮೂಲಕ ಭಕ್ತಿ ಭಾವದಿಂದ ಪೂಜೆ ಸಲ್ಲಿಸುತ್ತಿದ್ದಾರೆ. ಮಹಾಭಾರತದ ಪಾಂಡವರನ್ನು ಸ್ಮರಿಸುವ ಈ ಆಚರಣೆಯು ಬಲಿಪಾಡ್ಯ ದಿನದಂದು ನಡೆಯುತ್ತದೆ. ವನವಾಸದ ಸಂದರ್ಭದಲ್ಲಿ ಪಾಂಡವರು ಕಲ್ಲಿನಿಂದ ಕಡಬು ಹಾಗೂ ಮುಳ್ಳಿನಿಂದ ಶಾವಿಗೆಯನ್ನು ತಯಾರಿಸಿ ಊಟ ಮಾಡಿದ್ದರು ಎಂಬ ಪ್ರತೀತಿ ಈ ಆಚರಣೆಯೊಂದಿಗೆ ತಳಕು ಹಾಕಿಕೊಂಡಿದೆ.

ಈ ಹಿನ್ನೆಲೆಯಲ್ಲಿ ಗೋವಿನ ಸಗಣಿಯಿಂದ ಪಾಂಡವರ ಮೂರ್ತಿಗಳನ್ನು ರೂಪಿಸಿ, ಅವುಗಳ ಸುತ್ತ ಬಿಳಿ ದಾರವನ್ನು ಸುತ್ತಲಾಗುತ್ತದೆ. ಪಾಂಡವರಿಗೆ ಛತ್ರಿ, ಚಾಮರ ಹಾಗೂ ಕಿರೀಟಗಳ ಸಂಕೇತವಾಗಿ ಉತ್ತರಾಣಿ ಕಡ್ಡಿಗಳನ್ನು ಇರಿಸಲಾಗುತ್ತದೆ. ಬಳಿಕ ಬಿಳಿ ಮತ್ತು ಹಳದಿ ಬಣ್ಣದ ಹೂವುಗಳಿಂದ ಅಲಂಕರಿಸಿ, ಅನ್ನ ಹಾಗೂ ಮೊಸರಿನ ನೈವೇದ್ಯವನ್ನು ಅರ್ಪಿಸಲಾಗುತ್ತದೆ.

ಗ್ರಾಮೀಣ ಸಂಸ್ಕೃತಿ, ಧಾರ್ಮಿಕ ನಂಬಿಕೆ ಹಾಗೂ ಪಾರಂಪರಿಕ ಆಚ–ರಣೆಗಳ ಪ್ರತೀಕವಾಗಿರುವ ಸಗಣಿ ಪಾಂಡವರ ಪೂಜೆಯು ಕಡೇಕೊಪ್ಪ ಗ್ರಾಮದಲ್ಲಿ ಮಹಿಳೆಯರ ಭಕ್ತಿಭಾವದೊಂದಿಗೆ ಸಂಭ್ರಮದಿಂದ ನೆರವೇರುತ್ತಿದೆ. ಇಂತಹ ಆಚರಣೆಗಳು ನಮ್ಮ ನಾಡಿನ ಸಾಂಸ್ಕೃತಿ–ಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಪಾರ್ವತೆಮ್ಮ ಜಿಗೇರಿ ಹೇಳಿದ್ದಾರೆ.

ವಚನ ದರ್ಶನ

ಶೂಲದ ಮೇಲಣ ವಿಭೋಗವೇನಾದಡೇನೊ?ನಾನಾ ವರ್ಣದ ಸಂಸಾರ ಹಾವು ಹಾವಡಿಗನ ಸ್ನೇಹದಂತೆ!ತನ್ನಾತ್ಮ ತನಗೆ ಹಗೆಯಾದ ಮತ್ತೆಬಿನ್ನಾಣವುಂಟೆ, ಮಹಾದಾನಿ ಕೂಡಲಸಂಗಮದೇವಾ.

ಶೂಲದ ಮೇಲಣ ವಿಭೋಗವೇನಾದಡೇನೊ" ಎಂಬುದು 12ನೆಯ ಶತಮಾನದ ಪ್ರಸಿದ್ಧ ಸಮಾಜ ಸುಧಾರಕ ಹಾಗೂ ಶಿವಶರಣ ಜಗಜ್ಯೋತಿ ಬಸವಣ್ಣನವರ ಒಂದು ಅತ್ಯಂತ ಅರ್ಥಗರ್ಭಿತ ವಚನವಾಗಿದೆ. ಈ ವಚನವು ಲೌಕಿಕ ಸುಖದ ನಶ್ವರತೆ ಮತ್ತು ಆತ್ಮಸಾಕ್ಷಿಯ ಮಹತ್ವವನ್ನು ಮಾರ್ಮಿಕವಾಗಿ ವಿವರಿಸುತ್ತದೆ.

ಲೌಕಿಕ ಸುಖದ ಭ್ರಮೆ ಮರಣದಂಡನೆ ವಿಧಿಸಿ ಶೂಲಕ್ಕೇರಿಸಿದ ವ್ಯಕ್ತಿಗೆ ರಾಜಭೋಗ, ಸುಗಂಧ ದ್ರವ್ಯಗಳು ಅಥವಾ ಉತ್ತಮ ಸತ್ಕಾರಗಳನ್ನು ನೀಡಿದರೆ ಅದರಿಂದ ಏನು ಪ್ರಯೋಜನ? ಸಾವು ನಿಶ್ಚಿತವಾಗಿರುವಾಗ ಆ ಕ್ಷಣಿಕ ಭೋಗಗಳು ಹೇಗೆ ವ್ಯರ್ಥವೋ, ಹಾಗೆಯೇ ಈ ಲೌಕಿಕ ಜಗತ್ತಿನ ಮಾಯಾ ಸುಖಗಳೂ ಸಹ ಕ್ಷಣಿಕವಾಗಿವೆ.

ಸಂಸಾರದ ನಶ್ವರತೆ
ನಾನಾ ವರ್ಣಗಳಿಂದ (ಬಣ್ಣಗಳಿಂದ) ಕೂಡಿರುವ ಈ ಸಂಸಾರವು ಹಾವಾಡಿಗ ಮತ್ತು ಹಾವಿನ ಸ್ನೇಹದ ಹಾಗೆ. ಹಾವಾಡಿಗನು ಹಾವನ್ನು ಎಷ್ಟು ಪ್ರೀತಿಯಿಂದ ಸಾಕಿದರೂ, ಅದು ಯಾವಾಗ ಕಚ್ಚುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ಹಾಗೆಯೇ ಈ ಪ್ರಾಪಂಚಿಕ ಜೀವನವೂ ನಂಬಿಕೆಗೆ ಅರ್ಹವಲ್ಲ.

ಆತ್ಮಸಾಕ್ಷಿಯ ಜಾಗೃತಿ
ಒಬ್ಬ ಮನುಷ್ಯನಿಗೆ ತನ್ನ ಸ್ವಂತ ಆತ್ಮವೇ ಶತ್ರುವಾದ ಮೇಲೆ (ಅಂದರೆ ಅವನ ಆತ್ಮಸಾಕ್ಷಿಯೇ ಅವನ ತಪ್ಪುಗಳನ್ನು ಕಂಡು ಚುಚ್ಚುತ್ತಿರುವಾಗ), ಅವನು ಲೋಕದ ಎದುರು ಎಷ್ಟೇ ಜಾಣ್ಮೆ, ಜ್ಞಾನ ಅಥವಾ ಚಾತುರ್ಯವನ್ನು ಪ್ರದರ್ಶಿಸಿದರೂ ಅದಕ್ಕೆ ಯಾವ ಬೆಲೆಯೂ ಇರುವುದಿಲ್ಲ ಎಂಬುವುದು ಈ ವಚನದ ತಾತ್ಪರ್ಯ ವಚನಗಳು ಮನುಕುಲದ ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಸಿಂಧನೂರು

ಯುಪಿಎಸ್‌ಸಿ ಪರೀಕ್ಷೆಯಲ್ಲಿ 224ನೇ ರ‍್ಯಾಂಕ್ ಪಡೆದ ರಾಹುಲ್ ಜಯವಂತ್ ಪಾಟೀಲ್ ಅವರಿಗೆ ಸಚಿವ ಸತೀಶ್ ಜಾರಕಿಹೊಳಿ ಅವರಿಂದ ಸನ್ಮಾನ

ನೈಜ್ಯ ದೆಸೆ ನ್ಯೂಸ್

ಬೆಳಗಾವಿ: ಜಿಲ್ಲೆಯ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಕಳಖಾಂಬ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿ ರಾಹುಲ್ ಜಯವಂತ್ ಪಾಟೀಲ್ ಅವರು UPSC-CSE 2025 ಪರೀಕ್ಷೆಯಲ್ಲಿ 224ನೇ ರ‍್ಯಾಂಕ್ ಪಡೆದು ಜಿಲ್ಲೆಗೆ ಹಾಗೂ ಕ್ಷೇತ್ರಕ್ಕೆ ಕೀರ್ತಿ ತಂದಿದ್ದಾರೆ. ಇದಕ್ಕೂ ಮೊದಲು UPSC-2024ರ ಮೂಲಕ ಭಾರತೀಯ ಅರಣ್ಯ ಸೇವೆ (IFoS) ತರಬೇತಿಯಲ್ಲಿರುವ ರಾಹುಲ್ ಅವರ ಸಾಧನೆ ನಿಜಕ್ಕೂ ಹೆಮ್ಮೆಯ ಸಂಗತಿಯಾಗಿದೆ.



ಬೆಂಗಳೂರಿನ ಆರ್.ವಿ. ಕಾಲೇಜ್ ಆಫ್ ಎಂಜಿನಿಯರಿಂಗ್‌ನಲ್ಲಿ ಮೆಕ್ಯಾನಿಕಲ್ ಎಂಜಿನಿಯರಿಂಗ್ ಪದವಿ, ಬೆಳಗಾವಿಯ ಆರ್.ಎಲ್.ಎಸ್. ಕಾಲೇಜಿನಲ್ಲಿ ಪಿಯುಸಿ ಹಾಗೂ ವನಿತಾ ವಿದ್ಯಾಲಯದಲ್ಲಿ ಶಾಲಾ ಶಿಕ್ಷಣ ಪಡೆದಿರುವ ರಾಹುಲ್ ಅವರು ತಮ್ಮ ಪರಿಶ್ರಮ ಮತ್ತು ಸಾಧನೆಯ ಮೂಲಕ ಯುವಜನತೆಗೆ ಮಾದರಿಯಾಗಿದ್ದಾರೆ. ರಾಹುಲ್ ಪಾಟೀಲ್ ಅವರನ್ನು ಆತ್ಮೀಯವಾಗಿ ಅಭಿನಂದಿಸಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು, ಅವರ ಮುಂದಿನ ವೃತ್ತಿಜೀವನದಲ್ಲಿ ಇನ್ನಷ್ಟು ಉನ್ನತ ಸಾಧನೆಗಳು ಲಭಿಸಲಿ, ದೇಶದ ಆಡಳಿತ ಸೇವೆಯಲ್ಲಿ ಜನಪರವಾಗಿ ಕಾರ್ಯನಿರ್ವಹಿಸುವ ಅವಕಾಶ ದೊರೆಯಲಿ ಎಂದು ಹಾರೈಸಿದರು.



ಜಾಲಹಳ್ಳಿ ಹೋಬಳಿಯಲ್ಲೇ ಮುಂದುವರಿಸಲು ಜಿಲ್ಲಾಧಿಕಾರಿಗೆ ಮನವಿ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಅರಕೇರಾ ತಾಲೂಕು ಕೇಂದ್ರಕ್ಕೆ ಸೇರ್ಪಡೆಗೊಳಿಸಿರುವ ಮುಂಡರಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುಂಡರಗಿ, ಗಣಜಲಿ, ದೇವತ್ಕಲ್, ಕಾಟಮಳ್ಳಿ ಹಾಗೂ ಹುಲೇಗುಡ್ಡ ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಿ, ಜಾಲಹಳ್ಳಿ ಹೋಬಳಿಯಲ್ಲಿಯೇ ಮುಂದುವರಿಸಬೇಕೆಂದು ಆಗ್ರಹಿಸಿ ಗ್ರಾಮಸ್ಥರು 06–11–2026ರಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.



ಸರ್ಕಾರ ಈ ಗ್ರಾಮಗಳನ್ನು ದೇವದುರ್ಗ ತಾಲೂಕು ಹಾಗೂ ಜಾಲಹಳ್ಳಿ ಹೋಬಳಿಗೆ ಮರುಸೇರ್ಪಡೆಗೊಳಿಸಲು ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ಬಹಿಷ್ಕರಿಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ. ಕರ್ನಾಟಕ ಸರ್ಕಾರದ ಸಚಿವ ಸಂಪುಟದಲ್ಲಿ ಅರಕೇರಾ ತಾಲೂಕು ರಚನೆಗೆ ಅನುಮೋದನೆ ನೀಡಲಾಗಿದ್ದರೂ, ಭೌಗೋಳಿಕ ವಿಸ್ತೀರ್ಣ, ಜನಸಂಖ್ಯೆ ಹಾಗೂ ಆಡಳಿತಾತ್ಮಕ ಅನುಕೂಲತೆಗಳನ್ನು ಸಮರ್ಪಕವಾಗಿ ಪರಿಗಣಿಸದೆ ಅವೈಜ್ಞಾನಿಕವಾಗಿ ತಾಲೂಕು ರಚಿಸಲಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಇದರಿಂದ ಸಾರ್ವಜನಿಕರು ಸರ್ಕಾರಿ ಸೇವೆಗಳನ್ನು ಪಡೆಯಲು ಅನಗತ್ಯ ತೊಂದರೆ ಅನುಭವಿಸುವಂತಾಗಿದೆ ಎಂದು ತಿಳಿಸಿದ್ದಾರೆ.

ಅರಕೇರಾ ತಾಲೂಕು ಕೇಂದ್ರದಿಂದ ಮುಂಡರಗಿ ಗ್ರಾಮವು ಸುಮಾರು 35 ಕಿ.ಮೀ., ಗಣಜಲಿ 30 ಕಿ.ಮೀ., ದೇವತ್ಕಲ್ 20 ಕಿ.ಮೀ., ಕಾಟಮಳ್ಳಿ 25 ಕಿ.ಮೀ. ಹಾಗೂ ಹುಲೇಗುಡ್ಡ ಸುಮಾರು 30 ಕಿ.ಮೀ. ದೂರದಲ್ಲಿವೆ. ಈ ಗ್ರಾಮಗಳ ಜನರು ದೈನಂದಿನ ಕಂದಾಯ ಹಾಗೂ ಇತರ ಸರ್ಕಾರಿ ಕೆಲಸಗಳಿಗಾಗಿ ಅರಕೇರಾಗೆ ತೆರಳಲು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸಾರಿಗೆ ಸಂಪರ್ಕದ ಕೊರತೆಯೂ ಸಾರ್ವಜನಿಕರಿಗೆ ಸಮಸ್ಯೆಯಾಗಿದೆ ಎಂದು ಮನವಿಯಲ್ಲಿ ವಿವರಿಸಿದ್ದಾರೆ.

ಈ ಗ್ರಾಮಗಳನ್ನು ದೇವದುರ್ಗ ತಾಲೂಕು ಹಾಗೂ ಜಾಲಹಳ್ಳಿ ಹೋಬಳಿಗೆ ಮರುಸೇರ್ಪಡೆಗೊಳಿಸಿದರೆ ಸಾರ್ವಜನಿಕರಿಗೆ ಶಿಕ್ಷಣ, ಆರೋಗ್ಯ, ಸಾರಿಗೆ, ವ್ಯಾಪಾರ ಹಾಗೂ ಸರ್ಕಾರಿ ಸೇವೆಗಳನ್ನು ಪಡೆಯಲು ಅನುಕೂಲವಾಗಲಿದೆ. ಜಾಲಹಳ್ಳಿ ಪಟ್ಟಣದಲ್ಲಿ ಸಮುದಾಯ ಆರೋಗ್ಯ ಕೇಂದ್ರ, ನಾಡಕಚೇರಿ, ಪೊಲೀಸ್ ಠಾಣೆ, ಕೃಷಿ ಕೇಂದ್ರ, ಅಂಚೆ ಕಚೇರಿ, ವಿದ್ಯುತ್ ಉಪಕೇಂದ್ರ ಹಾಗೂ ಬ್ಯಾಂಕ್‌ಗಳ ಸೌಲಭ್ಯಗಳಿವೆ. ಜೊತೆಗೆ ರಾಜ್ಯ ಹೆದ್ದಾರಿ ಸಂಖ್ಯೆ 61 ಜಾಲಹಳ್ಳಿ ಮೂಲಕ ಹಾದುಹೋಗುವುದರಿಂದ ಸಾರಿಗೆ ಸಂಪರ್ಕವೂ ಉತ್ತಮವಾಗಿದೆ ಎಂದು ತಿಳಿಸಿದ್ದಾರೆ.

ಜಾಲಹಳ್ಳಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳು ಮತ್ತು ಪದವಿಪೂರ್ವ ಕಾಲೇಜುಗಳು ಇರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಅನುಕೂಲವಾಗಲಿದೆ. ಹೀಗಾಗಿ ಸಾರ್ವಜನಿಕರ ಶಿಕ್ಷಣ, ಆರೋಗ್ಯ, ಸಾರಿಗೆ ಹಾಗೂ ವ್ಯಾಪಾರ–ವಹಿವಾಟಿನ ಹಿತದೃಷ್ಟಿಯಿಂದ ಮೇಲ್ಕಂಡ ಐದು ಗ್ರಾಮಗಳನ್ನು ದೇವದುರ್ಗ ತಾಲೂಕಿಗೆ ಮರುಸೇರ್ಪಡೆಗೊಳಿಸಿ ಜಾಲಹಳ್ಳಿ ಹೋಬಳಿಯಲ್ಲಿಯೇ ಮುಂದುವರಿಸಬೇಕೆಂದು ಒತ್ತಾಯಿಸಿದ್ದಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ಹಾಗೂ ಕರ್ನಾಟಕ ಭೂ ಕಂದಾಯ ಅಧಿನಿಯಮದ ಸಂಬಂಧಿತ ಕಾನೂನು ಮತ್ತು ನಿಯಮಗಳನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಗ್ರಾಮಗಳಿಗೆ ಕಳುಹಿಸಿ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಬೇಕು. ನಂತರ ವೈಜ್ಞಾನಿಕ ಹಾಗೂ ಭೌಗೋಳಿಕ ಆಧಾರದ ಮೇಲೆ ಸೂಕ್ತ ನಿರ್ಧಾರ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಗ್ರಾಮಗಳ ಬೇಡಿಕೆಗೆ ಸ್ಪಂದಿಸಿ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಬಹಿಷ್ಕರಿಸುವ ನಿರ್ಧಾರ ಕೈಗೊಳ್ಳುವುದಾಗಿ ಗ್ರಾಮಸ್ಥರು ಎಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ಮಲ್ಲಯ್ಯ ಕಟ್ಟಿಮನಿ, ಮುದ್ದಯ್ಯ, ಶಿವರಾಜ್, ಸಿದ್ದನಗೌಡ ಮೂಡಲಗುಂಡ, ಹನಮಗೌಡ ಮದರ್‌ಕಲ್, ರಂಗಣ್ಣ ಕೊಲ್ಕರ್ ಸೇರಿದಂತೆ ವಿವಿಧ ಗ್ರಾಮಗಳ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.